# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 33 | THURSDAY 09-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಗುಜರಾತ್ ಜನರ ಬಗ್ಗೆ ಹೇಳಿಕೆ : ಖರ್ಗೆ ವಿಷಾದ



ನವದೆಹಲಿ: ಗುಜರಾತ್ ಜನರು ಅನಕ್ಷರಸ್ಥರು ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಮಾತಿಗೆ ವಿಷಾದ ವ್ಯಕ್ತಪಡಿಸಿದ್ದಾರೆ.

ಕೇರಳ ವಿಧಾನಸಭಾ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆರವರು ಗುಜರಾತ್ ಜನರು ಅನಕ್ಷರಸ್ಥರು ಎಂಬ ಹೇಳಿಕೆ ನೀಡಿದ್ದು ವಿವಾದಕ್ಕೆ ಕಾರಣವಾಗಿತ್ತು. ತಮ್ಮ ಮಾತಿಗೆ ದೊಡ್ಡ ಮಟ್ಟದಲ್ಲಿ ವಿರೋಧ ವ್ಯಕ್ತವಾಗುತ್ತಿದ್ದಂತೆಯೇ ಖರ್ಗೆ ಅವರು ವಿಷಾದ ವ್ಯಕ್ತಪಡಿಸಿ, ತಮ್ಮ ಮಾತಿನಿಂದ ಯಾರ ಮನಸ್ಸಿಗೆ ನೋವಾಗಿದ್ದರೆ ಕ್ಷಮೆ ಯಾಚಿಸುತ್ತೇನೆ ಎಂದಿದ್ದಾರೆ.

ನನ್ನ ಮಾತಿನ ಉದ್ದೇಶ ಯಾರನ್ನು ಅವಮಾನಿಸುವುದಾಗಲಿ ಯಾರಿಗಾದರೂ ನೋವು ಉಂಟು ಮಾಡುವುದಲ್ಲ. ಏನೇ ಇರಲಿ ನನ್ನ ಮಾತಿಗೆ ವಿಷಾದ ವ್ಯಕ್ತಪಡಿಸುತ್ತೇನೆ. ತಮ್ಮ ಮಾತಿನಿಂದ ನೋವಾಗಿದ್ದರೆ ಕ್ಷಮೆ ಕೇಳುತ್ತೇನೆ ಎಂದಿದ್ದಾರೆ.

ಎಐಸಿಸಿ ಅಧ್ಯಕ್ಷರ ಮಾತಿಗೆ ಬಿಜೆಪಿ ಸೇರಿದಂತೆ ಹಲವು ರಾಜಕೀಯ ಪಕ್ಷಗಳು ಆಕ್ರೋಶ ಹೊರಹಾಕಿ ಖರ್ಗೆ ಅವರು ತಮ್ಮ ಮಾತಿಗೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದವು.

## ‘ಸ್ವಿಸ್ ಬ್ಯಾಂಕ್ ನಿಂದ 15ಲಕ್ಷ ಹಾಕ್ತಿವಿ ಎಂದು ಮೋದಿ ಹೇಳಿದ್ದರು– ಹದಿನೈದು ಪೈಸೆಯೂ ಬರಲಿಲ್ಲ: ಧರ್ಮ, ಜಾತಿ ಹೆಸರಿನಲ್ಲಿ ಬಿಜೆಪಿ ಮತಯಾಚನೆ’

ಬಾಗಲಕೋಟೆ: ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಮಂಗಳವಾರ ಸಿಎಂ ಸಿದ್ದರಾಮಯ್ಯ ಬಾಗಲಕೋಟೆಯಲ್ಲಿ ಅಬ್ಬರದ ಪ್ರಚಾರ ನಡೆಸಿದರು. ಈ ವೇಳೆ ಬಿಜೆಪಿ ವಿರುದ್ಧ ಹರಿ ಹಾಯ್ದರು.

ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಪ್ರಚಾರದ ಭಾಗವಾಗಿ ಲಿಂಗಾಯತ ಪಂಚಮಸಾಲಿ ಸಮುದಾಯದ ನಾಯಕರ ಸಭೆಯನ್ನುದ್ದೇಶಿಸಿ ಮಾತನಾಡಿದ ಸಿಎಂ, ಭಾರತವು ವೈವಿಧ್ಯಮಯ ಜಾತಿ ಮತ್ತು ಧರ್ಮಗಳ ದೇಶವಾಗಿದೆ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಬರೆದ ಸಂವಿಧಾನವು ಸಮಾಜದ ಎಲ್ಲಾ ವರ್ಗಗಳಿಗೆ ಸಮಾನ ಅವಕಾಶಗಳನ್ನು ಒದಗಿಸುತ್ತದೆ ಎಂದು ಹೇಳಿದರು. ಆದರೆ ಕೋಮವಾದದಲ್ಲಿ ತೊಡಗಿರುವ ಬಿಜೆಪಿ ಜಾತಿ ಮತ್ತು ಮತಗಳ ಆಧಾರದ ಮೇಲೆ ಮತಯಾಚನೆ ಮಾಡುತ್ತಿದೆ ಎಂದು ಆರೋಪಿಸಿದರು.

ಬಸವಣ್ಣನವರ ಬೋಧನೆಗಳು ಸಮಾನತೆ ಮತ್ತು ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುತ್ತವೆ, ಅಂತಹ ಆದರ್ಶಗಳನ್ನು ವಿರೋಧಿಸುವ ಪಕ್ಷವು ಸಾರ್ವಜನಿಕ ಬೆಂಬಲಕ್ಕೆ ಅರ್ಹವಾಗಿದೆಯೇ ಎಂದು ಪ್ರಶ್ನಿಸಿದರು. ಬಿಜೆಪಿ ನಾಯಕರು ಬಸವಣ್ಣನವರ



ತತ್ವಶಾಸ್ತ್ರ ಅಥವಾ ಸಾಂವಿಧಾನಿಕ ಮೌಲ್ಯಗಳಲ್ಲಿ ನಿಜವಾಗಿಯೂ ನಂಬಿಕೆ ಇಡುವುದಿಲ್ಲ ಎಂದು ಅವರು ಆರೋಪಿಸಿದರು.

ಬಿಜೆಪಿಯ ಮಾಜಿ ಸಿಎಂಗಳಾದ ಬಿ.ಎಸ್. ಯಡಿಯೂರಪ್ಪ, ಡಿ.ವಿ. ಸದಾನಂದಗೌಡ, ಜಗದೀಶ್ ಶೆಟ್ಟರ್ ಮತ್ತು ಬಸವರಾಜ ಬೊಮ್ಮಾಯಿ ಅವರನ್ನು ಉಲ್ಲೇಖಿಸಿ ಸಿದ್ದರಾಮಯ್ಯ, ಅವರಲ್ಲಿ ಯಾರೂ ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಲು ಶ್ರಮಿಸಿಲ್ಲ ಅಥವಾ ಅವರ ಪರಂಪರೆಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಕೆಲಸ ಮಾಡಲಿಲ್ಲ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರವು ಸಾಮಾಜಿಕ ಸುಧಾರಕರು ಮತ್ತು ಐತಿಹಾಸಿಕ ವ್ಯಕ್ತಿಗಳನ್ನು ಗೌರವಿಸಲು ಕ್ರಮಗಳನ್ನು ತೆಗೆದುಕೊಂಡಿದೆ, ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಫೋಟೋವನ್ನು ಪ್ರದರ್ಶಿಸಲು ನಿರ್ದೇಶನಗಳನ್ನು ನೀಡುವುದು ಮತ್ತು ಕಿತ್ತೂರು ರಾಣಿ ಚೆನ್ನಮ್ಮ ಅವರ ಜನ್ಮ ದಿನಾಚರಣೆಯನ್ನು ಆಚರಿಸುವುದು ಸೇರಿದಂತೆ ಹಲವು ಸಾಮಾಜಿಕ ಜವಾಬ್ದಾರಿ ನಿರ್ವಹಿಸಲು ವಿಫಲವಾಗಿದೆ ಎಂದು ಅವರು ಬಿಜೆಪಿಯನ್ನು ಟೀಕಿಸಿದರು.

ಪಂಚಮಸಾಲಿ ಸಮುದಾಯವು ಹಿಂದೆ ಕಾಂಗ್ರೆಸ್‌ಗೆ ನೀಡಿದ ರಾಜಕೀಯ ಬೆಂಬಲವನ್ನು ಸಿದ್ದರಾಮಯ್ಯ ಸ್ಮರಿಸಿದರು. ವೀಣಾ ಕಾಶಪ್ಪನವರ್ ಮತ್ತು ಸಂಯುಕ್ತಾ ಪಾಟೀಲ್ ಅವರಂತಹ ಸಮುದಾಯದ ಮಹಿಳಾ ಮುಖಂಡರು ಪಕ್ಷದ ಬೆಂಬಲದೊಂದಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದಾರೆ ಎಂದು ಅವರು ಹೇಳಿದರು.

ಪಕ್ಷದ ಅಭ್ಯರ್ಥಿಯ ಬಗ್ಗೆ ಮಾತನಾಡಿದ ಸಿದ್ದರಾಮಯ್ಯ, ಉಮೇಶ್ ಮೇಟಿ ಜನರೊಂದಿಗೆ ಬಲವಾದ ಸಂಪರ್ಕ ಹೊಂದಿರುವ ಕುಟುಂಬದಿಂದ ಬಂದವರು ಎಂದು ಹೇಳಿದರು. ದಿವಂಗತ ಶಾಸಕ ಎಚ್.ವೈ. ಮೇಟಿ ಅವರು ಎಲ್ಲರನ್ನೂ ಒಳಗೊಳ್ಳುವ ಮನೋಭಾವ ಮತ್ತು ಸದ್ಭಾವನೆಗೆ ಹೆಸರುವಾಸಿಯಾಗಿದ್ದರು ಮತ್ತು ಅವರ ಕೊಡುಗೆಗಳನ್ನು ಗುರುತಿಸಿ ಪಕ್ಷವು ಅವರ ಕುಟುಂಬಕ್ಕೆ ಟಿಕೆಟ್ ನೀಡಿದೆ ಎಂದು ಹೇಳಿದರು.

ಸ್ವಿಸ್ ಬ್ಯಾಂಕ್ ನಿಂದ 15 ಲಕ್ಷ ಹಾಕ್ತಿವಿ ಎಂದು ಮೋದಿ ಹೇಳಿದ್ದರು. ಹದಿನೈದು ಪೈಸೆಯೂ ಬರಲಿಲ್ಲ. ಪ್ರತಿವರ್ಷ ಎರಡು ಕೋಟಿ ಉದ್ಯೋಗ ಅಂದರು, ಪ್ರಧಾನಿ ಆಗಿ 12 ವರ್ಷ ಆಯಿತು, 24 ಕೋಟಿ ಉದ್ಯೋಗ ಕೊಡಬೇಕಿತ್ತು ಕೊಟ್ಟರಾ? ರೈತರ ಆದಾಯ ದುಪ್ಪಟ್ಟು ಮಾಡ್ತಿನಿ ಅಂದ್ರು ಮಾಡಿದ್ರಾ! ಮೋದಿ ಅಧಿಕಾರಕ್ಕೆ ಬಂದಾಗ ಡಾಲರ್ ಬೆಲೆ 58 ಇತ್ತು. ಈಗ 95 ರೂಪಾಯಿ ಆಗಿದೆ ಎಂದು ಕಾಲೆಳೆದರು.

## ವಿದೇಶಗಳಲ್ಲಿ ಶರಣ ತತ್ವಗಳು ಪಸರಿಸಿದರೆ ಯುದ್ಧಗಳು ನಡೆಯುತ್ತಿರಲಿಲ್ಲ



ತೋಂಟದಾರ್ಯ ಮಠದಲ್ಲಿ ಸೋಮವಾರ ಜರುಗಿದ ಕಾರ್ಯಕ್ರಮದಲ್ಲಿ 2024 ನೇ ಸಾಲಿನ ರಾಜ್ಯಮಟ್ಟದ ತನಿಖಾ ವರದಿ ಪ್ರಶಸ್ತಿಗೆ ಭಾಜನರಾದ ಪತ್ರಕರ್ತ ಶಿವಾನಂದ ಹಿರೇಮಠ ಅವರನ್ನಿ ಸನ್ಮಾನಿಸಲಾಯಿತು. ಸಿದ್ದರಾಮ ಶ್ರೀಗಳು, ಎಸ್. ಎಸ್. ಪಾಟೀಲ, ವಿನಾಯಕ ಮಾನ್ವಿ, ಐ.ಬಿ.ಬೆನಕೊಪ್ಪ, ಬಾಲಚಂದ್ರ ಬರಮಗೌಡರ, ಡಾ. ಉಮೇಶ ಪುರದ ಇತರರು ಇದ್ದರು.

**ಬೆಳಗಾವಿ ವಾರ್ತೆ ಗದಗ ;** ಪಾಶ್ಚಾತ್ಯ ದೇಶಗಳಿಗೆ ಶರಣ ತತ್ವಗಳು ಪಸರಿಸಬೇಕು. ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ದೇಶಗಳಲ್ಲಿ ಶರಣ ತತ್ವಗಳು ಪಸರಿಸಿದರೆ ಯುದ್ಧಗಳು ನಡೆಯುತ್ತಿರಲಿಲ್ಲ ಎಂದು ತೋಂಟದಾ ರ್ಯ ಮಠದ ಸಿದ್ಧರಾಮ ಶ್ರೀಗಳು ಹೇಳಿದರು.

ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಸೋಮವಾರ ಏರ್ಪಡಿಸಿದ್ದ ಲಿಂಗಾಯತ ಪ್ರಗತಿಶೀಲ ಸಂಘದ ನೂತನ ಪದಾಧಿಕಾರಿಗಳಿಗೆ ಸೇವಾ ಹಸ್ತಾಂತರ ಹಾಗೂ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿ, ಬಸವಾದಿ ಶರಣರು ಮತ್ತು ಅವರ ವಚನಗಳಲ್ಲಿ ಶಾಂತಿ, ಬದುಕು, ಪರಸ್ಪರ ಗೌರವ, ಮಾನವೀಯ ಮೌಲ್ಯಗಳನ್ನು ತಿಳಿಸಿದ್ದಾರೆ. ನಾನು ಎನ್ನುವ ಬದಲಾಗಿ ನಾವು ಎನ್ನುವುದನ್ನು ಕಲಿಸಿದ್ದಾರೆ. ಸಕಲ ಜೀವಿಗಳ ಕ್ಷೇಮ ಬಯಸಿದ್ದಾರೆ. ಇಂತಹ ಶರಣ ತತ್ವಗಳು ಪಾಶ್ಚಾತ್ಯ ರಾಷ್ಟ್ರಗಳಲ್ಲಿ ಪಸರಿಸಿದ್ದರೆ ಇಂದು ಯುದ್ಧಗಳು ನಡೆಯುತ್ತಿರಲಿಲ್ಲ. ಯುದ್ಧವನ್ನು ಕೈಬಿಟ್ಟು ಮಾನವೀಯವ ಮೌಲ್ಯಗಳಿಗೆ ಬೆಲೆ ಕೊಡಬೇಕು ಎಂದು ನಾನು ಯುದ್ಧೋನ್ಮಾದ ದೇಶಗಳಿಗೆ ಮನವಿ ಮಾಡುತ್ತೇನೆ ಎಂದರು.


ಮಠದಲ್ಲಿ ಪ್ರತಿ ಸೋಮವಾರ ಮಠದಲ್ಲಿ ಜರಗುವ ಶಿವಾನುಭವ ಕಾರ್ಯಕ್ರಮ ಗಿನ್ನಿಸ್ ದಾಖಲೆ ಪುಸ್ತಕ ಸೇರ್ಪಡೆಗೆ ಅರ್ಹತೆ ಹೊಂದಿದೆ. ರಾಜ್ಯದ ಅನೇಕ ಮಠಗಳು ಶಿವಾನುಭ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸದೇ ಅರ್ಧಕ್ಕೆ ಕೈಬಿಟ್ಟ ಉದಾಹರಣೆಗಳು ಇವೆ. ಆದರೆ ಕಳೆದ 54 ವರ್ಷಗಳಿಂದ ತೋಂಟದಾರ್ಯ ಮಠದಲ್ಲಿ ನಿರಂತರ ಶಿವಾನುಭ ಕಾರ್ಯಕ್ರಮ ನಡೆದು ಕೊಂಡು ಬಂದಿದೆ. ಇಲ್ಲಿ ವೇದಿಕೆ ಮೇಲೆ ಸನ್ಮಾನಿತರು, ಉಪನ್ಯಾಸ ನೀಡಿದವರು ಭವಿಷ್ಯದಲ್ಲಿ ಉಜ್ವಲ ಭವಿಷ್ಯ ಕಂಡಿದ್ದಾರೆ. ಶಿವಾನುಭ ಕಾರ್ಯಕ್ರಮವನ್ನು ಒಂದು ವರ್ಷಗಳ ಕಾಲ ನಡೆಸಿಕೊಂಡು ಬಂದ ಸಮಿತಿ ಅಧ್ಯಕ್ಷ ಬಾಲಚಂದದ್ರ ಬರಮಗೌಡರ ಮತ್ತು ಸಮಿತಿ ಸದಸ್ಯರಿಗೆ ಅಭಿನಂದನೆಗಳು. ಜತೆಗೆ 2026 27 ನೇ ಸಾಲಿನಲ್ಲಿ ಸಮಿತಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಡಾ. ಉಮೇಶ ಪುರದ ಅವರ ಸೇವೆಯೂ ನಿರಾತಂಕವಾಗಿ ನಡೆಯುತ್ತದೆ ಎಂಬ ಭರವಸೆ ಇದೆ ಎಂದು ಸಿದ್ಧರಾಮ ಶ್ರೀಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಪ್ರಸಕ್ತ ಸಾಲಿನ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಡಾ. ಉಮೇಶ ಪುರದ ಮಾತನಾಡಿ, ಮಠದ ಹಲವಾರು ಕಾರ್ಯಕಮಗಳಲ್ಲಿ ಸೇವೆ ಸಲ್ಲಿಸಿದ್ದೇನೆ. ನನಗೆ ಈ ವರ್ಷ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದು ಹೆಮ್ಮೆ ಅನಿಸುತ್ತದೆ. ಲಿಂಗಾಯತ ಪ್ರಗತಿಶೀಲ ಸಂಘವು ರಾಜ್ಯೋತ್ಸವ ಪ್ರಶಸ್ತಿ ವಿಜೇತ ಸಂಘವಾಗಿದೆ. ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳು ಪೀಠಾಧಿಪತಿ ಆಗಲು ಸಹ ಲಿಂಗಾಯತ ಪ್ರಗತಿಶೀಲ ಸಂಘವೇ ಮುಖ್ಯ ಕಾರಣವಾಗಿತ್ತು ಎಂದರು.

ಸಂಘದ ನಿಕಟಪೂರ್ವ ಅಧ್ಯಕ್ಷ ಬಾಲಚಂದ್ರ ಬರಮಗೌಡರ ಮಾತನಾಡಿ, ಸಂಘದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಾಗ ಹಲವು ಜವಾಬ್ದಾರಿಗಳು ಇದ್ದವು. ಶ್ರೀಗಳ ಆಶೀರ್ವಾದದಿಂದ ಎಲ್ಲವನ್ನು ನಿಭಾಯಿಸಲಾಯಿತು. ಮುಂದೆಯೂ ಸಹಕಾರ ನೀಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಸಂಘದ ನೂತನ ಸದಸ್ಯರನ್ನು, ಪತ್ರಕರ್ತ ಶಿವಾನಂದ ಹಿರೇಮಠ ಸೇರಿದಂತೆ ಸಾಧಕರನ್ನು ಸನ್ಮಾನಿಸಲಾಯಿತು.

ಮಾಜಿ ಸಚಿವ ಎಸ್. ಎಸ್. ಪಾಟೀಲ, ಐ.ಬಿ.ಬೆನಕೊಪ್ಪ, ವಿನಾಯಕ ಮಾನ್ವಿ, ಎಸ್.ಎಸ್. ಪಟ್ಟಣಶೆಟ್ಟರ, ಕೊಟ್ರೇಶ ಮೆಣಸಿನಕಾಯಿ ಸೇರಿದಂತೆ ಇತರರು ಇದ್ದರು.

## ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ



**ಬೆಳಗಾವಿ ವಾರ್ತೆ ಗದಗ:** 2026 ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಮಂಗಳವಾರ 2026 ನೇ ಸಾಲಿನ ಹಿಂಗಾರು ಹಂಗಾಮಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕುಸುಬೆ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 05 ಕ್ವಿಂಟಲ್‌ನಂತೆ ಗರಿಷ್ಟ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಖರೀದಿಸಲು ಹಾಗೂ ಕುಸುಬೆ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಕುಸುಬೆ ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಸುಧಾ ಆರ್ ಬಂಡಿ ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೇ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 6540 ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರಗೆ ನಿಗದಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ ಕೇಂದ್ರದಿಂದ ಎನ್.ಸಿ.ಸಿ.ಎಫ್ ಹಾಗೂ ರಾಜ್ಯದಲ್ಲಿ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆ.ಓ.ಎಫ್) ಬೆಂಗಳೂರು ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### 13 ಖರೀದಿ ಕೇಂದ್ರ:

ಗದಗ ತಾಲೂಕು : OGCS : ಮುಳಗುಂದ ,ಬಳಗಾನೂರ,ಹೊಂಬಳ,
ನರಗುಂದ : OGCS :ಕಣಕಿಕೊಪ್ಪ
ಶಿರಹಟ್ಟಿ : OGCS: ರಣತೂರ
ಲಕ್ಷ್ಮೇಶ್ವರ : OGCS : ಶಿಗ್ಲಿ
ರೋಣ : OGCS : ಅಬ್ಬಗೇರಿ,
ಮೆ.ಕಿಸಾನ ಅಬಿವೃದ್ಧಿ ತೋಟಗಾರಿಕೆ ರೈತ ಉತ್ಪಾದಕರ ಕಂಪನಿ ಮಾಡಲಗೇರಿ
ಗಜೇಂದ್ರಗಡ : ಟಿಎಪಿಸಿಎಂಎಸ್ ನರಗಲ್,OGCS ನಿಡಗುಂದಿ,
ಮೆ.ನರೇಗಲ್ ರೈತ ಸಮೃದ್ಧಿ ತೋಟಗಾರಿಕಾ ಉತ್ಪಾದಕರ ಕಂಪನಿ,ನರೆಗಲ್
ಮುಂಡರಗಿ : OGCS ಬರದೂರ, ಪೇಠಲೂರ

## ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ ಗದಗ–ಬೆಟಗೇರಿ ಸಂಸ್ಥೆಯ 2025–26 ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗದಗ:** ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ಸಂಸ್ಥೆಯ 2025–26 ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ದಿನಾಂಕ: 07–04–2026 ರಂದು ಸಂಸ್ಥೆಯಲ್ಲಿ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಜರುಗಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿ.ಎನ್.ಟಿ.ಟಿ.ಎಫ್ ಅಧ್ಯಕ್ಷರಾದ ಕೆ.ಹೆಚ್.ಪಾಟೀಲ್, ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಶಿಕ್ಷಣ, ಕೌಶಲ್ಯ ಚಟುವಟಿಕೆಗಳು, ವಿನ್ಯಾಸ ಮತ್ತು ಸ್ವ–ಉದ್ಯೋಗದ ಕುರಿತು ವಿದ್ಯಾರ್ಥಿಗಳಿಗೆ ಸಲಹೆಗಳನ್ನು ಅವರು ನೀಡಿದರು.

ಸಂಸ್ಥೆಯ ಜಂಟಿ ನಿರ್ದೇಶಕರು/ ಪ್ರಾಂಶುಪಾಲರಾದ ಶ್ರೀಮತಿ ಸುಮಲತ.ಡಿ. ಅವರು ವಾರ್ಷಿಕ ವರದಿಯನ್ನು ಓದಿ ಸಂಸ್ಥೆಯ ಸಾಧನೆಗಳನ್ನು ವಿವರಿಸಿದರು.

ಶೈಕ್ಷಣಿಕ, ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮುಖ್ಯ ಅತಿಥಿಗಳು ಬಹುಮಾನ ಮತ್ತು ಪ್ರಶಸ್ತಿಗಳನ್ನು ವಿತರಿಸಿದರು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿದವು. ವಿದ್ಯಾರ್ಥಿಗಳು ಪ್ರದರ್ಶಿಸಿದ ಜಾನಪದ ನೃತ್ಯ, ದೇಶಭಕ್ತಿ ಗೀತೆ, ನಾಟಕಗಳು ಕಾರ್ಯಕ್ರಮದ




ಮೆರುಗು ಹೆಚ್ಚಿಸಿದವು .

ಈ ಸಂದರ್ಭದಲ್ಲಿ ಶ್ರೀಮತಿ ಅನುಪಮಾ ಹಿರೇಮಠ, ಉಪ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಹುಬ್ಬಳ್ಳಿ ಹಾಗೂ ಕುಮಾರಿ.ರಕ್ಷಿತಾ ಮಾಲಿಪಾಟೀಲ್, ವಿದ್ಯಾರ್ಥಿಗಳ ಕಾರ್ಯದರ್ಶಿ ಹಾಗೂ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಮತ್ತು ಸಂಸ್ಥೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೆಳಗಾವಿ: ಲೋಕಾಯುಕ್ತ ದಾಳಿ: AEE ಮನೆ ಸೇರಿ 3 ಕಡೆ ಶೋಧ




**ಬೆಳಗಾವಿ ವಾರ್ತೆ ಬೆಳಗಾವಿ:** ಅಕ್ರಮ ಆಸ್ತಿ ಸಂಪಾದನೆ ಆರೋಪದ ಬೆನ್ನಲ್ಲೇ ಜಿಲ್ಲಾ ನಗರಾಭಿವೃದ್ಧಿ ಕೋಶದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ (ಎಇಇ) ಅಜಯ ಸಿಂಗ್ ರಜಪೂತ್ ಅವರಿಗೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ಬೆಳ್ಳಂಬೆಳಿಗ್ಗೆ ಬಿಸಿ ಮುಟ್ಟಿಸಿದ್ದಾರೆ. ಬೆಳಗಾವಿಯ ಆಂಜನೇಯ ನಗರದಲ್ಲಿರುವ ಮನೆ ಸೇರಿದಂತೆ ಮೂರು ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದ ಅಧಿಕಾರಿಗಳು ಮಹತ್ವದ ದಾಖಲೆಗಳ ಪರಿಶೀಲನೆ ಕೈಗೊಂಡರು.

ಬೆಳಗಾವಿ ಜಿಲ್ಲೆಯಲ್ಲೇ ಈ ದಾಳಿ ಭಾರೀ ಚರ್ಚೆಗೆ ಗ್ರಾಸವಾಗಿದ್ದು, ಹುಕ್ಕೇರಿ ಹಾಗೂ ಅಥಣಿ ತಾಲೂಕಿನ ಮನೆಗಳ ಮೇಲೂ ಶೋಧ ಕಾರ್ಯ ಮುಂದುವರಿದಿದೆ. ಅಧಿಕಾರಿಗಳ ದಾಳಿಯ ವೇಳೆ ಮನೆಗಳಲ್ಲಿ ಸಂಗ್ರಹವಾಗಿದ್ದ ಆಸ್ತಿ ದಾಖಲೆಗಳು, ಬ್ಯಾಂಕ್ ಠೇವಣಿ ವಿವರಗಳು, ಚಿನ್ನಾಭರಣ ಹಾಗೂ ಇತರೆ ಬೆಲೆಬಾಳುವ ವಸ್ತುಗಳ ಬಗ್ಗೆ ತೀವ್ರ ಪರಿಶೀಲನೆ ನಡೆದಿದೆ ಎಂದು ತಿಳಿದುಬಂದಿದೆ.

ಮೂಲಗಳ ಪ್ರಕಾರ, ಈ ದಾಳಿಯಲ್ಲಿ ಕೋಟ್ಯಾಂತರ ರೂಪಾಯಿ ಮೌಲ್ಯದ ಸ್ಥಿರ-ಜಂಗಮ ಆಸ್ತಿ, ಚಿನ್ನಾಭರಣ ಹಾಗೂ ಭಾರೀ ಪ್ರಮಾಣದ ಠೇವಣಿ ಕುರಿತ ಮಾಹಿತಿ ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿರುವ ಸಾಧ್ಯತೆ ವ್ಯಕ್ತವಾಗಿದೆ. ಶೋಧ ಕಾರ್ಯ ಪೂರ್ಣಗೊಂಡ ಬಳಿಕವೇ ಅಕ್ರಮ ಆಸ್ತಿ ಪ್ರಮಾಣದ ನಿಖರ ಚಿತ್ರ ಹೊರಬೀಳಲಿದೆ.

ಡಿಎಸ್ಪಿ ಬಿ.ಎಸ್. ಪಾಟೀಲ ಮತ್ತು ಭರತ್ ರೆಡ್ಡಿ ನೇತೃತ್ವದಲ್ಲಿ ಲೋಕಾಯುಕ್ತ ತಂಡ ದಾಳಿ ನಡೆಸಿದ್ದು, ದಾಖಲಾತಿಗಳ ಪರಿಶೀಲನೆ ಇನ್ನೂ ಮುಂದುವರಿದಿದೆ. ಅಧಿಕಾರಿಗಳ ದಾಳಿಯಿಂದ ಸಂಬಂಧಿತ ವಲಯಗಳಲ್ಲಿ ತೀವ್ರ ಸಂಚಲನ ಉಂಟಾಗಿದೆ. ಅಕ್ರಮ ಆಸ್ತಿ ಆರೋಪದ ಸುಳಿವು ಆಧರಿಸಿ ನಡೆದ ಈ ಕಾರ್ಯಾಚರಣೆ ಬೆಳಗಾವಿಯಲ್ಲಿ ಮತ್ತೊಮ್ಮೆ ಭ್ರಷ್ಟಾಚಾರ ವಿರುದ್ಧ ಲೋಕಾಯುಕ್ತದ ಕಟ್ಟುನಿಟ್ಟಿನ ಹೆಜ್ಜೆ ಎಂಬಂತೆ ಪರಿಣಮಿಸಿದೆ.

ಶೋಧ ಕಾರ್ಯದ ಅಂತಿಮ ವರದಿ ಹೊರಬಂದ ನಂತರ ಇನ್ನಷ್ಟು ಸ್ಫೋಟಕ ವಿವರಗಳು ಬಹಿರಂಗವಾಗುವ ನಿರೀಕ್ಷೆಯಿದೆ.

# ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿಯ ಪೂರ್ವಭಾವಿ ಸಭೆ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ : ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್

**ಬೆಳಗಾವಿ ವಾರ್ತೆ ಗದಗ :** ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿಯನ್ನು ಏಪ್ರಿಲ್ 20 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬುಧವಾರ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಕುರಿತು ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರ ಮಾತನಾಡಿದರು.

ತಾಲೂಕು ಮಟ್ಟದಲ್ಲಿ ತಹಶೀಲ್ದಾರರ ಅದ್ಯಕ್ಷತೆಯಲ್ಲಿ ಜಯಂತಿಯ ಆಚರಣೆಗೆ ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ ಹಾಗೂ ಸಮಾಜದ ಹಿರಿಯರಿಗೆ ಸನ್ಮಾನಿಸುವ ಕಾರ್ಯಕ್ರಮ ಜಯಂತಿ ಕಾರ್ಯಕ್ರಮದಲ್ಲಿ ಜರುಗಲಿದೆ. ಶಿಷ್ಠಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಬಸವೇಶ್ವರರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ.

ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ವಿಚಾರಧಾರೆಗಳು ಸರ್ವರಿಗೂ ತಲುಪುವ ಕಾರ್ಯವಾಗಬೇಕು. ವಚನಗಳ ಮೂಲಕ ಸಮಾಜದ ಕಲ್ಯಾಣಕ್ಕಾಗಿ ಶ್ರಮಿಸಿದ ಜಗಜ್ಯೋತಿ ಬಸವೇಶ್ವರರ ತತ್ವಾದರ್ಶಗಳನ್ನು ಎಲ್ಲರಿಗೂ ತಿಳಿಸುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳೊಂದಿಗೆ ಸಮಾಜದ ಹಿರಿಯರು, ಗಣ್ಯರು, ವಿವಿಧ ಸಂಘಟನೆಗಳು ಜಯಂತಿಯ ಯಶಸ್ವಿಗೆ ಕೈಜೋಡಿಸಬೇಕೆಂದರು.

ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ, ಕಲಾ ತಂಡಗಳ ಆಯ್ಕೆ ಪ್ರಬಂಧ ಸ್ಪರ್ಧೆ ಆಯೋಜನೆ, ಸ್ತಬ್ದ ಚಿತ್ರ ಮೆರವಣಿಗೆ ಕುರಿತು ಚರ್ಚಿಸಲಾಯಿತು. ಜಯಂತಿ ಕಾರ್ಯಕ್ರಮಕ್ಕೂ ಮುನ್ನ ಮೆರವಣಿಗೆಯ ಆಯೋಜನೆ ಕುರಿತು ವಿವಿಧ ಮುಖಂಡರು ತಮ್ಮ ತಮ್ಮ ಸಲಹೆಗಳನ್ನು ಸಭೆಯ ಗಮನಕ್ಕೆ ತಂದರು.



ಸಭೆಯಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಸಮಾಜದ ಮುಖ್ಯಸ್ಥರು, ಗಣ್ಯರು ಹಿರಿಯರು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಬಸವರಾಜ.ವ್ಹಿ. ಬಳ್ಳಾರಿ ಸರ್ವರನ್ನು ಸ್ವಾಗತಿಸಿದರು.

# ರಕ್ತದಾನ ಶ್ರೇಷ್ಠದಾನವಾಗಿದೆ : ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್



**ಬೆಳಗಾವಿ ವಾರ್ತೆ ಗದಗ:** ರಕ್ತದಾನವು ಶ್ರೇಷ್ಠದಾನವಾಗಿದ್ದು ರಕ್ತದಾನ ಮಾಡುವುದರಿಂದ ತುರ್ತು ಸಂದರ್ಭದಲ್ಲಿ, ಅಪಘಾತಗಳು ಸಂಭವಿಸಿ ದಾಗ, ಶಸ್ತ್ರಚಿಕಿತ್ಸೆ ಸಂದರ್ಭಗಳಲ್ಲಿ ಮತ್ತೊಂ ದು ಜೀವ ಉಳಿಸಲು ಸಹಾಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ,ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಗದಗ-ಬೆಟಗೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಲ್ಲಸಮುದ್ರ-ಗದಗ ಇವರ ಸಹಯೋಗದಲ್ಲಿ ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರರವರ 135ನೇ ಹಾಗೂ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಮ್ ರವರ 119ನೇ ಜಯಂತ್ಯೋತ್ಸವ ನಿಮಿತ್ಯ ಬುಧ ವಾರ ಜಿಲ್ಲಾಡಳಿತ ಭವನದ ಆಡಿಟೋ ರಿಯಂ ಹಾಲ್ ದಲ್ಲಿ ಹಮ್ಮಿಕೊಳ್ಳಲಾಗಿದ್ದ ರಕ್ತದಾನ ಶಿಬಿರವನ್ನುದ್ದೇಶಿಸಿ ಮಾತನಾಡಿದರು.

ರಕ್ತದಾನ ಮಾಡುವುದರಿಂದ ಮತ್ತೊಂದು ಜೀವ ಉಳಿಸಿದ ತೃಪ್ತಿ ಹಾಗೂ ಮಾನಸಿಕ ಶಾಂತಿ ಇರುತ್ತದೆ. ರಕ್ತದಾನವು ದೇಹದಲ್ಲಿ ಹೊಸ ರಕ್ತಕಣಗಳ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್.ಎನ್.ಬಳ್ಳಾರಿ ಅವರು ಮಾತನಾಡಿ ಸಂವಿಧಾನ ಶಿಲ್ಪಿ, ಮಹಾಮಾನವತಾವಾದಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಹಸಿರುಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾವ್ ಅವರ ಜಯಂತಿ ಪ್ರಯುಕ್ತ ಹಮ್ಮಿಕೊಳ್ಳಲಾಗಿರುವ ಈ ರಕ್ತದಾನ ಶಿಬಿರವು ಮೆಚ್ಚುವಂತಹದ್ದು. ಮತ್ತೊಂದು ಜೀವ ಉಳಿಸುವ ರಕ್ತದಾನ ಮಹಾದಾನವಾಗಿದೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಶೀಲ್ದಾರರಾದ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್.ನೀಲಗುಂದ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ಶ್ರೀಮತಿ ನಂದಾ ಹಣಬರಟ್ಟಿ, ಡಿಡಿಪಿಐ ಆರ್.ಎಸ್. ಬುರುಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ, ಸೇರಿದಂತೆ ಸಮಾಜದ ಗಣ್ಯರು, ಹಿರಿಯರು, ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು, ಹಾಜರಿದ್ದರು.

# ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನರಾಮ್ ಅವರ ಜಯಂತಿ ಪ್ರಯುಕ್ತ ರಕ್ತದಾನ ಶಿಬಿರ

ಗದಗ : ಡಾ. ಬಿ.ಆರ್ ಅಂಬೇಡ್ಕರ್‌ವರ ಹಾಗೂ ಡಾ. ಬಾಬು ಜಗಜೀವನರಾಮ್‌ರವರ ಜಯಂತಿಯ ನಿಮಿತ್ಯ ದಿನಾಂಕ: 08-04-2026 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಡಳಿತ ಭವನದ ಅಡಿಟೋರಿಯಮ್ ಹಾಲ್‌ನಲ್ಲಿ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ರಕ್ತದಾನ ಶಿಬಿರದಲ್ಲಿ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ/ಹಿಂದುಳಿದ ವರ್ಗ/ಅಲ್ಪಸಂಖ್ಯಾತರ ವರ್ಗ ಹಾಗೂ ಎಲ್ಲ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಸದರಿ ರಕ್ತದಾನ ಶಿಬಿರದಲ್ಲಿ ಭಾಗವಹಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ, ಶ್ರೀಮತಿ ನಂದಾ ಹಣಬರಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲ್ಲೂಕಿನ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಅಗ್ನಿಶಾಮಕ ಠಾಣೆ ನಿರ್ಮಾಣಕ್ಕೆ ಭೂಮಿ ಪೂಜೆಯನ್ನು ಮಾಡಿದ್ದು, ವರ್ಷದೊಳಗೆ ಕಾಮಗಾರಿಯು ಪೂರ್ಣಗೊಳ್ಳಲಿದೆ



ಮೂಡಲಗಿ: ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಬುಧವಾರ ಪಟ್ಟಣದ ದನಗಳ ಪೇಟೆಯ ಹತ್ತಿರ ಅಂದಾಜು 2.30 ಕೋಟಿ ರೂಪಾಯಿ ವೆಚ್ಚದಲ್ಲಿ (ಪಟಗುಂದಿ ರಸ್ತೆ) ನಿರ್ಮಾಣಗೊಳ್ಳಲಿರುವ ನೂತನ ಅಗ್ನಿಶಾಮಕ ಠಾಣೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು

**ಬೆಳಗಾವಿ ವಾರ್ತೆ ಮೂಡಲಗಿ:** ತಾಲ್ಲೂಕಿನ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಅಗ್ನಿಶಾಮಕ ಠಾಣೆ ನಿರ್ಮಾಣಕ್ಕೆ ಭೂಮಿ ಪೂಜೆಯನ್ನು ಮಾಡಿದ್ದು, ವರ್ಷದೊಳಗೆ ಕಾಮಗಾರಿಯು ಪೂರ್ಣಗೊಳ್ಳಲಿದೆ ಎಂದು ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಬುಧವಾರ ಪಟ್ಟಣದ ದನಗಳ ಪೇಟೆಯ ಹತ್ತಿರ ಅಂದಾಜು 2.30 ಕೋಟಿ ರೂಪಾಯಿ ವೆಚ್ಚದಲ್ಲಿ (ಪಟಗುಂದಿ ರಸ್ತೆ) ನಿರ್ಮಾಣಗೊಳ್ಳಲಿರುವ ನೂತನ ಅಗ್ನಿಶಾಮಕ ಠಾಣೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಗುಣಮಟ್ಟದ ಕಾಮಗಾರಿಯನ್ನು ಕೈಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಮೂಡಲಗಿ ಹೊಸ ತಾಲ್ಲೂಕು ನಂತರ ಅನೇಕ ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರಂಭಿಸಲಾಗಿದೆ. ಮುಖ್ಯವಾಗಿ ಅಗ್ನಿಶಾಮಕ ಠಾಣಾ ನಿರ್ಮಾಣ ಮಾಡಬೇಕೆಂಬುದು ಇಲ್ಲಿನ ಸಾರ್ವಜನಿಕರ ಬೇಡಿಕೆಯಾಗಿತ್ತು. ಇದಕ್ಕಾಗಿ ಅಧಿವೇಶನದಲ್ಲಿ ಎರಡ್ಮೂರು ಬಾರಿ ಸರ್ಕಾರವನ್ನು ಒತ್ತಾಯಿಸಿ ಕೊನೆಗೂ ಠಾಣಾ ನಿರ್ಮಾಣಕ್ಕೆ ಸರ್ಕಾರವು ಅಸ್ತು ನೀಡಿದೆ. ಇಲ್ಲಿನ ಪುರಸಭೆಯಿಂದ ಅಗತ್ಯವಿರುವ ಕಟ್ಟಡ ನಿರ್ಮಾಣಕ್ಕೆ 1.29 ಎಕರೆ ನಿವೇಶನವನ್ನು ನೀಡಲಾಗಿದೆ. ಮುಂದಿನ 2027 ರಲ್ಲಿ ಮೂಡಲಗಿಯಲ್ಲಿ ಭವ್ಯವಾದ ಕಟ್ಟಡ ತಲೆಎತ್ತಲಿದೆ ಎಂದು ಅವರು ತಿಳಿಸಿದರು.

ಈಗಿನ ಕಾಂಗ್ರೆಸ್ ಸರ್ಕಾರದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ಅನುದಾನವನ್ನು ನೀಡುತ್ತಿಲ್ಲ. ಪಂಚ ಗ್ಯಾರಂಟಿ ಯೋಜನೆಗಳಿಗೆ ಎಲ್ಲ ಹಣ ಹೋಗುತ್ತಿದೆ. ಅದರೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿಯವರ ಮೂಲಕ ನಮ್ಮ ಕ್ಷೇತ್ರಕ್ಕೆ ಸ್ವಲ್ಪ ಮಟ್ಟಿಗೆ ಅನುದಾನವು ಬರುತ್ತಿದೆ. ರಸ್ತೆಗಳ ನಿರ್ಮಾಣಕ್ಕಾಗಿ ಸಿಎಂಐಡಿಎಫ್ ಯೋಜನೆಯಡಿ 25 ಕೋಟಿ ರೂಪಾಯಿ ಅನುದಾನವು ಮಂಜೂರಾಗಿದೆ. ಇದರಲ್ಲಿ 1.95 ಕೋಟಿ ರೂಪಾಯಿ ವೆಚ್ಚದಲ್ಲಿ ಮೂಡಲಗಿ ಕ್ರಾಸ್ ದಿಂದ ಎಸ್‌ಎಸ್‌ಆರ್ ಕಾಲೇಜುವರೆಗಿನ ರಸ್ತೆ, 60 ಲಕ್ಷ ರೂಪಾಯಿ ವೆಚ್ಚದಲ್ಲಿ ಎಪಿಎಂಸಿಯಿಂದ ಬಸ್ ನಿಲ್ದಾಣದ ಹಳ್ಳದವರೆಗಿನ ರಸ್ತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಪುರಸಭೆಯ ಅನುದಾನದಡಿ 46 ಲಕ್ಷ ರೂಪಾಯಿ ವೆಚ್ಚದಲ್ಲಿ ಹಳ್ಳದಿಂದ ಟಿಪ್ಪು ಸುಲ್ತಾನ್ ವೃತ್ತದವರೆಗೆ ರಸ್ತೆಯನ್ನು ನಿರ್ಮಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಸಚಿವ ಸತೀಶ್ ಜಾರಕಿಹೊಳಿಯವರು ನಮ್ಮ ಕ್ಷೇತ್ರದ ಅಭಿವೃದ್ಧಿ ಯೋಜನೆಗಳಿಗೆ ಸರ್ಕಾರದ ಅನುದಾನವನ್ನು ಮಂಜೂರು ಮಾಡಿಸಲು ಕಾರಣೀಕರ್ತರಾಗಿದ್ದಾರೆ. ಅದಕ್ಕಾಗಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆಂದು ಅವರು ಹೇಳಿದರು.

ಮೂಡಲಗಿ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ ನಿರ್ಮಾಣ ಸೇರಿದಂತೆ ಮೂರು ಹೊಸ ಕಾಮಗಾರಿಗಾಗಿ ಸುಮಾರು 9.09 ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಿದೆ ಎಂದು ಅವರು ಹೇಳಿದರು.

**ಗುದ್ದಲಿ ಪೂಜೆ:**

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಸಮಾಜ ಕಲ್ಯಾಣ ಇಲಾಖೆಯ ಅನುದಾನದಡಿ 1.51 ಕೋಟಿ ರೂಪಾಯಿ ವೆಚ್ಚದ ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿದರು.

ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಅನುದಾನದಲ್ಲಿ ಸುಮಾರು 5.28 ಕೋಟಿ ರೂಪಾಯಿ ವೆಚ್ಚದಲ್ಲಿ 4.45 ಎ???ಲ್ಡಿ ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣ ಘಟಕಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಗುದ್ದಲಿ ಪೂಜೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ ಪ್ರಕಾಶ ಗುಡುಮೆ, ಮುಖಂಡರಾದ ರವೀಂದ್ರ ಸೋನವಾಲಕರ, ಅನ್ವರ ನದಾಫ, ರಾಮಣ್ಣಾ ಹಂದಿಗುಂದ, ರವಿ ಸಣ್ಣಕ್ಕಿ, ಡಾ. ಎಸ್.ಎಸ್.ಪಾಟೀಲ, ಬಿಜೆಪಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಅಜೀಜ ಡಾಂಗೆ, ಸಂತೋಷ ಸೋನವಾಲಕರ, ಈರಪ್ಪ ಬನ್ನೂರ, ಹಣಮಂತ ಗುಡ್ಲಮನಿ, ರವಿ ನೇಸೂರ, ಪ್ರಶಾಂತ ನಿಡಗುಂದಿ, ಮರೆಪ್ಪ ಮರೆಪ್ಪಗೋಳ, ಜಯಾನಂದ ಪಾಟೀಲ, ಶಿವು ಚಂಡಕಿ, ಪ್ರಕಾಶ ಮಾದರ, ನ್ಯಾಯವಾದಿ ಲಕ್ಷ್ಮಣ ಅಡಿಹುಡಿ, ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ, ಭೂಸೇನಾ ನಿಗಮದ ಎಇ ಆರ್.ಪಿ, ನಾರಾಯಣಕರ, ಅಗ್ನಿಶಾಮಕ ಎಇಇ ಬಸವರಾಜ ಬಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ (ಪ್ರ) ಮಲಬನ್ನವರ, ಅಗ್ನಿ ಶಾಮಕ ಠಾಣೆಯ ಆರ್.ಎಫ್.ಓ ರಂಗನಾಥ, ಗುತ್ತಿಗೆದಾರ ಅಶೋಕ ಹಸರಂಗಿ ಸೇರಿದಂತೆ ಮೂಡಲಗಿ- ಗುರ್ಲಾಪೂರ ಪಟ್ಟಣದ ಹಲವು ಗಣ್ಯರು, ಪುರಸಭೆ ಮಾಜಿ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳು ಉಳಿಯಬೇಕಾದರೆ ನಮ್ಮ ನಿಮ್ಮೆಲ್ಲರ ಜವಾಬ್ದಾರಿ



**ಬೆಳಗಾವಿ ವಾರ್ತೆ ಗೋಕಾಕ:** ಸರ್ಕಾರಿ ಶಾಲೆಗಳು ಉಳಿಯಬೇಕಾದರೆ ನಮ್ಮ ನಿಮ್ಮೆಲ್ಲರ ಜವಾಬ್ದಾರಿ. ಪಿಎಂ ಶ್ರೀ ಯೋಜನೆ ಅಡಿಯಲ್ಲಿ ನಿರ್ಮಿಸಲಾದ ಶಾಲಾ ಗ್ರಂಥಾಲಯಕ್ಕೆ ಶಾಸಕರ ಅನುದಾನದಡಿಯಲ್ಲಿ ಶಾಲೆಯ ಹಳೆ ವಿದ್ಯಾರ್ಥಿಗಳಿಗೆ ಮತ್ತು ಪ್ರಸ್ತುತ ಮಕ್ಕಳ ಹೆಚ್ಚಿನ ವಿದ್ಯಾಭ್ಯಾಸಕ್ಕೆ ಶಾಸಕರಾದ ಬಾಲಚಂದ್ರ ಜಾರಕಿಹೊಳಿ ಅವರು ಗ್ರಂಥಾಲಯಕ್ಕೆ 5ಲಕ್ಷ ರೂಪಾಯಿಗಳನ್ನು ಸಹಕಾರ ನೀಡುವುದರೊಂದಿಗೆ ಶೈಕ್ಷಣಿಕ ರಂಗಕ್ಕೆ ಯಾವತ್ತಿಗೂ ಬೆನ್ನೆಲುಬಾಗಿ ಇರುತ್ತಾರೆ ಎಂದು ಯುವ ನಾಯಕ ಸರ್ವೋತ್ತಮ ಜಾರಕಿಹೊಳಿ ಸ್ಮರಿಸಿದರು.

ಅವರು, ಪಿಎಂ ಶ್ರೀ ಸರ್ಕಾರಿ ಪ್ರಾಥಮಿಕ ಶಾಲೆ ಸಿದ್ಧಾರೂಢ ಮಠ ಮೆಳವಂಕಿಗೆ ಓ ಸ್ನಾಟ್ ಸಂಸ್ಥೆಯಿಂದ ನಿರ್ಮಿಸಿರುವ ಶಾಲಾ ಕಟ್ಟಡವನ್ನು ಉದ್ಘಾಟನೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಓ ಸ್ನಾಟ್ ಪದಾಧಿಕಾರಿ ರಾಮಮೂರ್ತಿ ಮಾತನಾಡಿ ನಮ್ಮ ಸಂಸ್ಥೆಯಿಂದ 121ನೇ ಕಟ್ಟಡ ಇದಾಗಿದೆ ಈ ಯೋಜನೆಗೆ ಒಂದು ಕೋಟಿ ರೂ ಬೆಂಬಲ ನೀಡಿದ ದಾನಿಗಳಾದ ಶ್ರೀಮತಿ ಸ್ನೇಹ ಮತ್ತು ಶ್ರೀ ಕೀರ್ತಿ ಮೇಲುಕೋಟೆ ಅವರು ಮಕ್ಕಳಿಗೆ ಸುರಕ್ಷಿತ ಹಾಗೂ ಸುಸಜ್ಜಿತ ವಾತಾವರಣ ಒದಗಿಸಿ ಶಾಲೆಯು ವಿದ್ಯಾಭ್ಯಾಸದ ಶ್ರೇಷ್ಠತೆ ಮತ್ತು ಸಮಗ್ರ ವಿದ್ಯಾರ್ಥಿ ಅಭಿವೃದ್ಧಿಯತ್ತ ಗಮನಹರಿಸಲು ಸಾಧ್ಯವಾಗುವಂತೆ ಮಾಡಿದ್ದಾರೆ ಎಂದರು.

ಹಾಸ್ಯ ಕಲಾವಿದ ಪ್ರಾಣೇಶ್ ಗಂಗಾವತಿಯವರು ಉದ್ಘಾಟನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಭರಮಣ್ಣ ಉಪ್ಪಾರ, ತಹಶೀಲ್ದಾರ್ ಡಾ.ಮೋಹನ್ ಭಸ್ಮೆ, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಯಾದ ಪರಶುರಾಮ ಘಸ್ತೆ, ಮೂಡಲಗಿ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಪಿ ಬಿ ಹಿರೇಮಠ, ಹಾಸ್ಯ ಕಲಾವಿದ ಬಸವರಾಜ ಹವಾಮನೆ, ಮುಖ್ಯೋಪಾಧ್ಯಾಯ ಈರಣ್ಣ ಕಡಕೋಳ ಸೇರಿದಂತೆ ಎಸ್‌ಡಿಎಂಸಿ ಪದಾಧಿಕಾರಿಗಳು ಅನೇಕರು ಇದ್ದರು.





ಗೋಕಾಕ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ (ರಿ) ಇವರಿಂದ ಗೋಕಾಕ್ ಯೋಜನಾ ಕಚೇರಿ ವ್ಯಾಪ್ತಿಯ ದುಂಡಾನಟ್ಟಿ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರಿ ಸಂಘಕ್ಕೆ ಧರ್ಮಸ್ಥಳದ ಧರ್ಮದರ್ಶಿ ಡಾ.ವಿರೇಂದ್ರ ಹೆಗಡೆಯವರು ಶಿಫಾರಸ್ಸು ಮಾಡಿದ 2ಲಕ್ಷ ರರೂಗಳ ಮಂಜುರಾತಿ ಪತ್ರವನ್ನು ಬುಧವಾರದಂದು ವಿತರಿಸ ಲಾಯಿತು. ಜಿಲ್ಲಾ ನಿರ್ದೇಶಕ ಎಚ್ ಆರ್ ಲವಕುಮಾರ್, ಯೋಜನಾಧಿಕಾರಿ ತಿಮ್ಮೆಶ್ ಎಂ ಸಿ, ವಲಯದ ಮೇಲ್ವಿಚಾರಕ ಮಹಾಂತೇಶ್ ಎಂ ಇದ್ದರು.




ಗೋಕಾಕ: ಇಲ್ಲಿಯ ಜೆಸಿಐ ಸಂಸ್ಥೆಯ ಮಹಿಳಾ ಘಟಕದಿಂದ ವಿಶ್ವ ಮಹಿಳಾ ದಿನಾಚರಣೆ ನಿಮಿತ್ಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸುಷ್ಮಿತಾ ಕಿಶೋರ ಶೆಟ್ಟಿ ಇವರನ್ನು ಮಂಗಳವಾರದಂದು ಸತ್ಕರಿಸಲಾಯಿತು.

ಅಧ್ಯಕ್ಷೆ ಮೀನಾಕ್ಷಿ ಸವದಿ, ರಾಜೇಶ್ವರಿ ಕಿತ್ತೂರ, ನೇತ್ರಾವತಿ ಲಾತೂರ, ಸುವರ್ಣಾ ಹವಾಲ್ದಾರ, ಅನ್ನಪೂರ್ಣ ಉಳ್ಳಾಗಡ್ಡಿ ಸೇರಿದಂತೆ ಇತರರು ಇದ್ದರು.

# ಡೋಣಿ ತಾಂಡಾದಲ್ಲಿ ಘೋರ ಕೃತ್ಯ; ಒಂದೇ ಕುಟುಂಬದ ಆರು ಮಂದಿ ಸಾವು-ಬದುಕಿನ ನಡುವೆ ಹೋರಾಟ!



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯ ಮುಂಡರಗಿ ತಾಲೂಕಿನ ಡೋಣಿ ತಾಂಡಾದಲ್ಲಿ ಮೊನ್ನೆ ನಡುರಾತ್ರಿ ನಡೆದ ಘಟನೆ ಇಡೀ ಜಿಲ್ಲೆಯನ್ನೇ ನಡುಗಿಸಿದೆ. ದಿನವಿಡೀ ದುಡಿದು ದಣಿದಿದ್ದ ಕುಟುಂಬದ ಸದಸ್ಯರು ತಂಪಾದ ಗಾಳಿಗೆ ಮನೆಯ ಮುಂಭಾಗದಲ್ಲಿ ಗಾಢ ನಿದ್ರೆಗೆ ಜಾರಿದ್ದರು. ಸಮಯ ಸುಮಾರು ಒಂದು ಗಂಟೆಯಾ ದಾಗ ಅನಿರೀಕ್ಷಿತವಾಗಿ ಬಂದ ಹರ್ಜಪ್ಪ ಲವಾಣಿ ಎಂಬ ವ್ಯಕ್ತಿ, ಮಲಗಿದ್ದವರ ಮೇಲೆ ದೊಣ್ಣೆಯಿಂದ ಅಮಾನುಷವಾಗಿ ಹಲ್ಲೆ ನಡೆಸಲು ಮುಂದಾಗಿದ್ದಾನೆ. ಯಾವುದೇ ಪ್ರಚೋದನೆ ಇಲ್ಲದೆ ನಡೆದ ಈ ದಾಳಿಯಿಂದ ಗಾಬರಿಗೊಂಡ ಗಾಯಾಳುಗಳ ಕಿರುಚಾಟ ಇಡೀ ತಾಂಡಾದ ಮೌನವನ್ನು ಸೀಳಿತ್ತು. ದೊಣ್ಣೆಯಿಂದ ತಲೆ ಮತ್ತು ಮುಖಕ್ಕೆ ಮನಸೋಇಚ್ಛೆ ಹೊಡೆದ ಪರಿಣಾಮವಾಗಿ ಎಗ್ಗಪ್ಪ ಭಜನೆನಾಯಕ, ಶೇಖಪ್ಪ ನಾಯಕ್, ದೇವಕ್ಕ ನಾಯಕ್ ಸೇರಿದಂತೆ ಒಟ್ಟು ಆರು ಮಂದಿ ರಕ್ತದ ಮಡುವಿನಲ್ಲಿ ಬಿದ್ದಿದ್ದರು. ಗ್ರಾಮಸ್ಥರು ಸ್ಥಳಕ್ಕೆ ಧಾವಿಸು ವಷ್ಟರಲ್ಲಿ ಹಲ್ಲೆಗೊಳಗಾದವರ ಸ್ಥಿತಿ ಚಿಂತಾಜನಕವಾಗಿತ್ತು. ತಕ್ಷಣವೇ ಎಲ್ಲರನ್ನೂ ಆಸ್ಪತ್ರೆಗೆ ಸಾಗಿಸಲಾಗಿದ್ದು, ಸದ್ಯ ಅವರು ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ. ಘಟನೆಯ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಮುಂಡರಗಿ ಪೊಲೀಸರು ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಅವರು, ಆರೋಪಿಯು ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿದ್ದ ಎನ್ನುವುದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ ಎಂದು ಹೇಳಿದ್ದಾರೆ. ಆತ ಈ ಹಿಂದೆ ಚಿಕಿತ್ಸೆ ಪಡೆಯುತ್ತಿದ್ದ ದಾಖಲೆಗಳೂ ಲಭ್ಯವಿದ್ದು, ಆತನ ಅಸ್ವಸ್ಥತೆಯೇ ಈ ದಾಳಿಗೆ ಪ್ರಮುಖ ಕಾರಣವಿರ ಬಹುದು ಎಂದು ಶಂಕಿಸಲಾಗಿದೆ. ಸದ್ಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀ ಸರು ಘಟನೆಯ ಹಿಂದೆ ಇನ್ನಾವುದಾ ದರೂ ಉದ್ದೇಶವಿದೆಯೇ ಎಂಬ ಬಗ್ಗೆ ಸಮಗ್ರ ತನಿಖೆ ಮುಂದುವರಿಸಿದ್ದಾರೆ. ಮಲಗಿದ್ದ ಜಾಗದಲ್ಲೇ ಅನಿರೀಕ್ಷಿತ ದಾಳಿಗೆ ಒಳಗಾದ ಕುಟುಂಬದವರ ಕ್ರಂದನ ತಾಂಡಾದಲ್ಲಿ ಶೋಕದ ವಾತಾವರಣ ಸೃಷ್ಟಿಸಿದೆ.

# ಬಾಯಿ ತೆರೆದ ಚರಂಡಿಗಳು: ಅಪಾಯಕ್ಕೆ ಆಹ್ವಾನ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಅನೇಕ ಕಡೆ ಬಾಯ್ದೆರೆದ ಚರಂಡಿಗಳು, ಹಳ್ಳ ಹಿಡಿದ ಒಳಚರಂಡಿ ಯೋಜನೆಯ ಚಂಬರ್‌ಗಳು, ಕುಸಿದ ಸಿಡಿಗಳು ಅಪಾಯಕ್ಕೆ ಅಹ್ವಾನ ನೀಡುತ್ತಿವೆ. ನಿತ್ಯ ಇವುಗಳಿಂದ ಬಚಾ ವಾಗಲು ವಾಹನ ಸವಾರರು, ಮಕ್ಕಳು, ವೃದ್ದರು ಜೀವ ಭಯದಲ್ಲಿ ಸಂಚರಿಸು ವಂತಾಗಿದೆ. ಇವುಗಳಿಂದ ದಿನನಿತ್ಯ ಅವಾಂ ತರ, ಅಪಘಾತ, ಅನಾಹುತ ಆಗುತ್ತಲೇ ಇರುತ್ತವೆ. ಮನೆಯಿಂದ ಹೊರ ಹೋದವ ರನ್ನು ದೇವರೇ ಕಾಪಾಡಬೇಕು ಎಂಬ ಪರಿಸ್ಥಿತಿ ಇಲ್ಲಿಯದ್ದಾಗಿದೆ. ಸಾರ್ವ ಜನಿಕರು ಪುರಸಭೆಯ ಕಾರ್ಯವೈಖರಿಗೆ ಹಿಡಿಶಾಪ ಹಾಕುತ್ತಲೇ ಇರುತ್ತಾರೆ.

ಇದಕ್ಕೆ ಉದಾಹರಣೆ ಎಂಬಂತೆ ಬಜಾರ್ ರಸ್ತೆಯ ಹಾವಳಿ ಆಂಜನೇಯ ದೇವಸ್ಥಾನ ಹಿಂದಿನ ದೊಡ್ಡದಾದ ತೆರೆದ ಚರಂಡಿ ಹತ್ತಿರ ಸ್ಕೂಟಿ ಸವಾರ ಮತ್ತು ಟಾಟಾ ಏಸ್ ನಡುವೆ ಅಪಘಾತ ನಡೆದು ಸವಾರ ಆಳೆತ್ತರದ ಚರಂಡಿಗೆ ಬಿದ್ದಿದ್ದಾನೆ. ಕೂಡಲೇ ಚರಂಡಿಗೆ ಬಿದ್ದ ವ್ಯಕ್ತಿಯನ್ನು ಅಲ್ಲಿದ್ದ ಸಾರ್ವಜನಿಕರು ಮೇಲೆತ್ತಿ ರಕ್ಷಿಸಿದ್ದಾರೆ. ಸ್ಕೂಟಿ, ನುಜ್ಜುಗುಜ್ಜಾಗಿದೆ. ನಿತ್ಯ ನಡೆಯುತ್ತಿರುವ ಇಂತಹ ಅನಾಹುತಕ್ಕೆ ಹೊಣೆಗಾರರು ಯಾರು? ಎಂಬುದು ಸಾರ್ವಜನಿಕರ ಅಳಲಾಗಿದೆ.

ರಸ್ತೆ ತಿರುವಿನಲ್ಲೇ ಇರುವ ಈ ತೆರದ ಚರಂಡಿಯಿಂದ ಸಾಕಷ್ಟು ಅವಾಂತರ ಗಳಾಗುತ್ತಿವೆ. ಪಟ್ಟಣದಲ್ಲಿ ಇಂತಹ ಅನೇಕ ತೆರೆದ ಚರಂಡಿಗಳಿದ್ದು ಆಗುತ್ತಿರುವ ಅನಾಹುತಗಳಿಂದ ತಪ್ಪಿಸುವ ಹೊಣೆಗಾ ರಿಕೆಯಿಂದ ಸಂಬಂಧಪಟ್ಟ ಪುರಸಭೆ ನುಣುಚಿಕೊಳ್ಳದಂತೆ ಜವಾಬ್ದಾರಿ, ಜನಪರ ಕಾಳಜಿ ಮೆರೆಯಬೇಕೆಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

# ಕೋಡಿಯಲ್ಲಮ್ಮ ಜಾತ್ರಾಮಹೋತ್ಸವ; ಕುಸ್ತಿ ಪಂದ್ಯಾವಳಿ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಜಾತ್ರಾಮಹೋತ್ಸವ ಅಂಗವಾಗಿ ಕಳೆದ 3 ದಿನಗಳಿಂದ ದೇವಸ್ಥಾನದ ಬಯಲಿನಲ್ಲಿ ಮುಕ್ತ ಕುಸ್ತಿ ಪಂದ್ಯಾವಳಿಗಳು ನಡೆದವು.

ಸೋಮವಾರ ಪೈನಲ್ ಗೋಧೋಳಿ ಸಮಯದಲ್ಲಿ ನಡೆದ ವಾರಗಿ ಪೈಕಿ-ಪರಸಿ ಪೈಕಿ ಕುಸ್ತಿ ಅಂತಿಮ ಪಂದ್ಯಾವಳಿಯಲ್ಲಿ ಲಕ್ಕುಂಡಿಯ ಪೈಲ್ವಾನ್ ಮುತ್ತು ಭಾವಿ ಗೆಲುವಿನ ಖಡಗದೊಂದಿಗೆ ವಿಜಯ ಮಾಲೆ ಧರಿಸಿದರು.

ಮೊದಲು ವಾರಿಗಿ ಪೈಕಿ ಕುಸ್ತಿಯಲ್ಲಿ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಹಾಗೂ ಯಳವಟ್ಟಿಯ ಶಿದ್ದಲಿಂಗೇಶ ಈ ಇಬ್ಬರ ನಡುವೆ ನಡೆದ ಕಾದಾಟದಲ್ಲಿ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಜಯಶಾಲಿಯಾಗಿ ಬೆಳ್ಳಿ ಕಡಗ ಮತ್ತು ನಗದು ತಮ್ಮದಾಗಿಸಿಕೊಂಡರು. ನಂತರ ಪರಸಿ ಪೈಕಿ ಕುಸ್ತಿಯಲ್ಲಿ ಮುತ್ತು ಬಾವಿ ಹಾಗೂ ಬೊಮ್ಮನಹಳ್ಳಿಯ ನಿಂಗಪ್ಪ ಇಬ್ಬರು ಮದಗಜಗಳ ನಡುವೆ 40 ನಿಮಿಷಗಳ ಕಾಲ ನಡೆದ ರೋಚಕ ಕಾಳದಲ್ಲಿ ಮತ್ತೆ ಮುತ್ತು ಪೈಲ್ವಾನ್ ಕೈ ಮೇಲಾಯಿತು.

ಸೆಣಸಿದ ಕಲಿಗಳ ವಿವಿಧ ಭಂಗಿ, ಪಟ್ಟು, ಕರಾಮತ್ತುಗಳು ನೋಡುಗರ ಮೈನವಿರೇಳಿಸುವಂತೆ ಮಾಡಿದವು. ಸ್ಥಳೀಯ ಪೈಲ್ವಾನರು ಸೇರಿದಂತೆ ಲಕ್ಕುಂಡಿ ಹಾವೇರಿ ಬೊಮ್ಮನಹಳ್ಳಿ ಧಾರವಾಡ, ಹೂವಿಲಗೋಳ ಹನುಮನಾಳ ಶಿರಹಟ್ಟಿ ಬಾಳೆಹೊಸೂರ ರಾಣಿಬೆನ್ನೂರ ಬ್ಯಾಡಗಿ, ಬಡಮಲ್ಲಿ, ಕಲಘಟಗಿ ಸೇರಿ ಅನೇಕ ಕಡೆಗಳಿಂದ 40 ಕ್ಕೂ ಹೆಚ್ಚು ಜೋಡಿಗಳು ಕುಸ್ತಿಯಲ್ಲಿ ಸೆಣಸಾಡಿಸಿದರು.

ಸಂಜೆ ಬಹುಮಾನ ಸ್ವೀಕರಿಸಿ ಮಾತನಾಡಿದ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಅವರು ಕುಸ್ತಿ ನಮ್ಮ ಹಿರಿಯರಿಂದ ಬಳುವಳಿಯಾಗಿ ಬಂದ ಜಾನಪದ ಶೈಲಿಯ ಗ್ರಾಮೀಣ ಕ್ರೀಡೆಯಾಗಿದೆ. ನಮ್ಮ ಸಂಸ್ಕತಿ, ಪರಂಪರೆಯ ಪ್ರತೀಕವಾದ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ-ಬೆಳೆಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ. ಜಾತ್ರಾ ಮಹೋತ್ಸವ ಅಂಗವಾಗಿ ಸಂಪ್ರದಾಯದಂತೆ ನಡೆಸಿಕೊಂಡು ಬರಲಾಗುತ್ತಿರುವ ಈ ಕುಸ್ತಿ ಪಂದ್ಯಾವಳಿಯನ್ನು ದೇವಸ್ಥಾನ ಸೇವಾ ಕಮೀಟಿ, ಭಕ್ತಮಂಡಳಿ, ಪಟ್ಟಣದ ಹಿರಿಯರು ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಮತ್ತು ನಮ್ಮಂತಹ ಗ್ರಾಮೀಣ ಕುಸ್ತಿ ಪಟುಗಳಿಗೆ ವೇದಿಕೆ ಕಲ್ಪಿಸಿದಂತಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಶ್ರೀ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಕಮೀಟಿಯವರು, ಪಟ್ಟಣದ ಹಿರಿಯರು, ಪೈಲ್ವಾನರು, ಕುಸ್ತಿ ಪ್ರೇಮಿಗಳು ಇದ್ದರು.

# ಬೆಂಕಿ: ಬಣವೆ ಭಸ್ಮ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಉಳ್ಳಟ್ಟಿ ರಸ್ತೆಗೆ ಹೊಂದಿಕೊಂಡಿರುವ ಜಮೀನಿನಲ್ಲಿ ಹೊಟ್ಟಿನ ಬಣವಿ, ತಗಡಿನ ಶೆಡ್ಡಿಗೆ ಬೆಂಕಿ ತಗುಲಿ ಅಪಾರ ಹಾನಿ ಸಂಭವಿಸಿದ ಘಟನೆ ಮಂಗಳವಾರ ನಡೆದಿದೆ. ಪಟ್ಟಣದ ನಾಗಪ್ಪ ತಿಪ್ಪಣ್ಣ ಇಚ್ಚಂಗಿ ಅವರು ತಮ್ಮ ಜಮೀನಿನಲ್ಲಿ ಈ ವರ್ಷ ದಿಂದ ಹೈನುಗಾರಿಕೆ ಮಾಡಲು ಲಕ್ಷಾಂತರ ರೂ ಖರ್ಚು ಮಾಡಿ ಬೋರ್‌ವೆಲ್ ಹಾಕಿ, ತಗಡಿನ ಶೆಡ್ ನಿರ್ಮಿಸಿ 4 ಟ್ರಾಕ್ಟರ್ ಹೊಟ್ಟು ಸಂಗ್ರಹಿಸಿದ್ದರು. ಯಾರೋ ಕಿಡಗೇಡಿಗಳು ಹೊತ್ತಿಸಿದ ಕಿಡಿಯಿಂದ ಬೋರ್‌ವೆಲ್ ವೈಯರ್, ಹೊಟ್ಟು, ಶೆಡ್ಡು ಸುಟ್ಟು ಕರಕಲಾಗಿವೆ. ಸ್ಥಳಕ್ಕೆ ಅಗ್ನಿ ಶಾಮಕ ಸಿಬ್ಬಂದಿ ಆಗಮಿಸುವಷ್ಟರಲ್ಲಾಗಲೇ ಎಲ್ಲವೂ ಬೂದಿಯಾಗಿತ್ತು.

ಹೊರ ವಲಯದಲ್ಲಿ ಹಗಲು ಹೊತ್ತಲ್ಲೇ ಹೆಚ್ಚುತ್ತಿರುವ ಸಿಗರೇಟು, ಗಾಂಜಾ, ಮದ್ಯದ ವ್ಯಸನಿಗಳಿಂದ ಬೇಸಿಗೆಯಲ್ಲಿ ಇಂತಹ ಘಟನೆಗಳಿಗೆ ಅಮಾಯಕರು ಬಲಿಯಾಗುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ತಾಲೂಕಿನಲ್ಲಿ ಇಂತಹ ಅನೇಕ ದುರ್ಘಟನೆಗಳು ನಡೆದಿವೆ. ನಷ್ಟಕ್ಕೊಳಗಾದ ಬಡ ರೈತನಿಗೆ ಸರ್ಕಾರದಿಂದ ಪರಿಹಾರ ಧನ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಯವರು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ರೈತ ಮುಖಂಡ ವಿರೂಪಾಕ್ಷ ಆದಿ ಆಗ್ರಹಿಸಿದ್ದಾರೆ.

# ಕಾರ್ಮಿಕ ವರ್ಗದಲ್ಲಿ ಭೇದಭಾವ ಸಲ್ಲದು: ನ್ಯಾಯಮೂರ್ತಿ ಸದಾನಂದ ನಾಯ್ಕ್



**ಬೆಳಗಾವಿ ವಾರ್ತೆ ಗಂಗಾವತಿ :** ಕಾಯಕವೇ ಕೈಲಾಸ ಎಂಬ ಬಸವಣ್ಣನವರ ವಚನದಲ್ಲಿ ತಾವು ಮಾಡುವ ಕೆಲಸದಲ್ಲಿ ಶ್ರದ್ಧೆ ನಿಷ್ಠೆ ಇದ್ದಾಗ ಅದು ಕೈಲಾಸ ಸ್ವರೂಪವನ್ನು ಪಡೆದು ಕೊಳ್ಳುತ್ತದೆ ಎಂದು ನ್ಯಾಯ ಮೂರ್ತಿಗಳಾದ ಸದಾನಂದ ನಾಯ್ಕ್ ಹೇಳಿದರು.

ಅವರು ಮಂಗಳವಾರದಂದು ಶ್ರಮಜೀವಿ ಕಟ್ಟಡ ಕಾರ್ಮಿಕರ ಸಂಘದ ಐದನೇ ವಾರ್ಷಿಕೋತ್ಸವ ಮತ್ತು ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಗಂಗಾವತಿಯ ಉಪವಿಭಾಗ ಹಾಗೂ ಹೆರಿಗೆ ಆಸ್ಪತ್ರೆಯ ಸರ್ವ ಸಿಬ್ಬಂದಿಗೆ ಗೌರವ ಸನ್ಮಾನ ಕಾರ್ಯಕ್ರಮವನ್ನು ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ಉದ್ಘಾಟಿಸಿ ಮಾತನಾಡಿ "ಪ್ರತಿಯೊಬ್ಬ ಕೆಲಸ ಮಾಡುವವರು ಕಾರ್ಮಿಕನೇ. ನ್ಯಾಯಾಧೀಶರು ಕಾರ್ಮಿಕರೇ, ಕಟ್ಟಡ ಕಾರ್ಮಿಕರು ಕಾರ್ಮಿಕರೇ. ಯಾವುದೂ ಕನಿಷ್ಠ ಅಥವಾ ಶ್ರೇಷ್ಠ ಅಲ್ಲ. ಜಗಜ್ಯೋತಿ ಬಸವಣ್ಣನವರು ಹೇಳಿದಂತೆ ಯಾವ ಕಾಯಕದಲ್ಲಾದರೂ ಕೈಲಾಸವಿದೆ. ಕಾರ್ಮಿಕರು ದುಶ್ಚಟಗಳಿಗೆ ಬಲಿಯಾಗದೆ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಪರಿಸರ ಸಂರಕ್ಷಣೆಗಾಗಿ ಗಂಗಾವತಿಯಲ್ಲಿ ಏಕಬಳಕೆ ಪ್ಲಾಸ್ಟಿಕ್ ನಿರ್ಮೂಲನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ" ಎಂದರು.

ನ್ಯಾಯಾಧೀಶ ನಾಗೇಶ್ ಪಾಟೀಲ್ ಅವರು ಮಾತನಾಡಿ, "ಕಾರ್ಮಿಕರು ನ್ಯಾಯ ಸಿಗುವ ಬಗ್ಗೆ ಅನುಮಾನ ಪಡಬೇಡಿ. ಜಿಲ್ಲೆ ಮತ್ತು ತಾಲ್ಲೂಕು ನ್ಯಾಯಾಲಯಗಳಲ್ಲಿ ಉಚಿತ ಸಲಹೆ ಹಾಗೂ ನ್ಯಾಯ ಪಡೆಯಲು ಎಲ್ಲಾ ಸೌಲಭ್ಯಗಳಿವೆ. ನಿಮ್ಮ ಹಕ್ಕುಗಳಿಗೆ ತೊಂದರೆ ಯಾದಲ್ಲಿ ನ್ಯಾಯಾಲಯಕ್ಕೆ ಭೇಟಿ ನೀಡಿ" ಎಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಕಾರ್ಮಿಕರಿಗಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ ಜರುಗಿತು.

ನಂತರ ಸಭೆಗೆ ಆಗಮಿಸಿದ ಮಾಜಿ ಶಾಸಕ ಪರಣ್ಣ ಮುನವಳ್ಳಿ ಅವರು, "ಆರೋಗ್ಯ ಇಲಾಖೆಯಲ್ಲೇ ವಿಶ್ವ ಆರೋಗ್ಯ ದಿನಾಚರಣೆ ಆಚರಿಸುತ್ತಿರುವುದು ಹಾಗೂ ಸಿಬ್ಬಂದಿಯನ್ನು ಸನ್ಮಾನಿಸುತ್ತಿರುವುದು ಅರ್ಥಪೂರ್ಣ. ಕಟ್ಟಡ ಕಾರ್ಮಿಕರು ಸೇರಿ ದಂತೆ ಎಲ್ಲರೂ ಆಹಾರ, ನಿದ್ರೆ, ಮನಸ್ಸಿನ ನೆಮ್ಮದಿಯನ್ನು ಕಾಪಾಡಿಕೊಂಡು ಆರೋಗ್ಯವಾಗಿ ಬಾಳಬೇಕು" ಎಂದರು.

ಈ ವೇಳೆ ಶ್ರಮಜೀವಿ ಕಟ್ಟಡ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಶಿವಕುಮಾರ್ ಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು, ಕೊಪ್ಪಳ ಜಿಲ್ಲೆಯ ಜಿಲ್ಲಾಧ್ಯಕ್ಷ ಪಂಪಾಪತಿ ಇಂಗಳಗಿ ಸರ್ವರನ್ನು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಡಾ. ಸೋಮಶೇಖರ್, ಅಶೋಕ್, ಸ್ಮಿತಾ ಐಲಿ , ವಕೀಲ ಸಂಘದ ತಾಲೂಕ ಅಧ್ಯಕ್ಷ ಎಸ್. ಎಸ್. ನಾಯಕ್, ಅಧಿಕಾರಿ ಪ್ರಕಾಶ್ ಖುಸುಬಿ, ಸೇರಿದಂತೆ ಸಂಘದ ಪದಾಧಿಕಾರಿಗಳು, ಸದಸ್ಯರು ಮತ್ತು ಗಣ್ಯರು ಉಪಸ್ಥಿತರಿದ್ದರು.

ನಗರಸಭೆ ವ್ಯಾಪ್ತಿಯ ಪ್ರವೇಶ ಒಂದರಲ್ಲಿ ರಾಷ್ಟ್ರಮಟ್ಟದ ಆರೋಗ್ಯ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಮೂರು ಬಾರಿ ಕಾಯಕ ರತ್ನ ಪ್ರಶಸ್ತಿ ಪಡೆದುಕೊಂಡ ಉಪ ವಿಭಾಗದ ಆಡಳಿತ ಅಧಿಕಾರಿ ಡಾ.ಈಶ್ವರ ಸವ ಡಿ ಅವರ. ಅನುಪಸ್ಥಿತಿಯಲ್ಲಿ ಓರ್ವ ವೈದ್ಯರಿಗೆ ಶ್ರಮಜೀವಿ ಕಾಯಕ ರತ್ನ ಎಂಬ ಪ್ರಶಸ್ತಿ ನೀಡಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯರು ಸೇರಿದಂತೆ ಒಟ್ಟು 160ಸಿಬ್ಬಂದಿಗಳಿಗೆ ಗೌರವ ಸಮರ್ಪಣೆ ಹಾಗೂ ಸನ್ಮಾನಿಸಲಾಯಿತು. ರಾಜ್ಯದ ನಾನಾ ಭಾಗಗಳಿಂದ ಸಂಘದ ಅಧ್ಯಕ್ಷರು ಪದಾಧಿಕಾರಿಗಳು ಹಾಗೂ ಸದಸ್ಯರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಭೀಮ್ ಪ್ರಜಾ ಸಂಘದ ತಾಲ್ಲೂಕು ಘಟಕಗಳ ಪದಾಧಿಕಾರಿಗಳ ನೇಮಕ




**ಬೆಳಗಾವಿ ವಾರ್ತೆ ಕೊಪ್ಪಳ:** ಭೀಮ್ ಪ್ರಜಾ ಸಂಘ ಕೊಪ್ಪಳ ಜಿಲ್ಲಾ ಘಟಕದ ವತಿಯಿಂದ ಕಾರಟಗಿ ಹಾಗೂ ಕನಕಗಿರಿ ತಾಲ್ಲೂಕು ಘಟಕಗಳನ್ನು ರಚಿಸಲಾಯಿತು.

ಕಾರಟಗಿ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಅನಿಲ್ ರಾಠೋಡ್ ಅವರನ್ನು ಆಯ್ಕೆ ಮಾಡಲಾಗಿದ್ದು, ಹುಸೇನಪ್ಪ ಕಟ್ಟಿಮನಿ ಬರಗೂರು ಅವರು ಪ್ರಮುಖ ಪದಾಧಿಕಾರಿಯಾಗಿ ಆಯ್ಕೆಯಾಗಿದ್ದಾರೆ. ಕಾರ್ಯದರ್ಶಿಯಾಗಿ ಯಮನೂರ ಬೂದಗುಂಪ ಹಾಗೂ ಖಜಾಂಚಿಯಾಗಿ ಮಹದೇವ್ ರಾಠೋಡ್ ಅವರನ್ನು ನೇಮಕ ಮಾಡಲಾಗಿದೆ.

ಇನ್ನೂ ಕನಕಗಿರಿ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಯಮನೂರ ನವಲಿ ಅವರನ್ನು ಆಯ್ಕೆ ಮಾಡಲಾಗಿದ್ದು, ಉಪಾಧ್ಯಕ್ಷರಾಗಿ ಯಲ್ಲಪ್ಪ ಜೀರಾಳ್ ಅವರನ್ನು ನೇಮಕ ಮಾಡಲಾಗಿದೆ. ಇನ್ನೂ ಕನಕಗಿರಿ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಯಮ ನೂರ ನವಲಿ ಅವರನ್ನು ಆಯ್ಕೆ ಮಾಡಲಾ ಗಿದ್ದು, ಉಪಾಧ್ಯಕ್ಷರಾಗಿ ಯಲ್ಲಪ್ಪ ಜೀರಾಳ್ ಅವರನ್ನು ನೇಮಕ ಮಾಡಲಾಗಿದೆ.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು ಮಾತನಾಡಿ, ಸಂಘಟನೆಯನ್ನು ತಾಲ್ಲೂಕು ಮಟ್ಟದಲ್ಲಿ ಬಲಪಡಿಸುವುದರ ಜೊತೆಗೆ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದರು.

# ಗವಿಸಿದ್ದಪ್ಪ ಹೊಸಮನಿಗೆ ಪತ್ರಕರ್ತರಿಂದ ಆತ್ಮೀಯ ಸನ್ಮಾನ



**ಬೆಳಗಾವಿ ವಾರ್ತೆ ಕೊಪ್ಪಳ :** ಪ್ರಾದೇಶಿಕ ದಿನಪತ್ರಿಕೆಗಳ ಕೊಪ್ಪಳ ಜಿಲ್ಲಾ ವರದಿಗಾರರಿಂದ ಹೊಸದಾಗಿ ವಾರ್ತಾಧಿಕಾರಿಯಾಗಿ ಆಗಮಿಸಿದ ಹಿನ್ನೆಲೆಯಲ್ಲಿ ಗವಿಸಿದ್ದಪ್ಪ ಹೊಸಮನಿ ಅವರಿಗೆ ಜಿಲ್ಲೆಯ ಪತ್ರಕರ್ತರು ಆತ್ಮೀಯವಾಗಿ ಸನ್ಮಾನಿಸಿದರು ಗೌರವಿಸಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಾದ ಜಿ.ಎಸ್. ಗೋನಾಳ ಹಾಗೂ ಬಸವರಾಜ್ ಗುಡ್ಲಾ ಅವರು, ಗವಿಸಿದ್ದಪ್ಪ ಹೊಸಮನಿ ಅವರು ಈ ಹಿಂದೆ ತಮ್ಮ ಸೇವಾ ಅವಧಿಯಲ್ಲಿ ಪತ್ರಕರ್ತರೊಂದಿಗೆ ಉತ್ತಮ ಸಂಬಂಧ ಬೆಳೆಸಿಕೊಂಡು, ಪರಿಣಾಮಕಾರಿಯಾದ ಆಡಳಿತ ನೀಡಿದ್ದರು, ಅದೇರೀತಿ ಮುಂದೇನು ಆಡಳಿತ ನಡೆಸಲಿ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವರದಿಗಾರರಾದ ಉಮೇಶ್ ಅಬ್ಬಿಗೇರಿ ಹಾಗೂ ಎಂ.ಎನ್. ಕುಂದಗೋಳ ಅವರು, ಪತ್ರಕರ್ತರ ಸಮಸ್ಯೆಗಳ ಪರಿಹಾರಕ್ಕೆ ವಾರ್ತಾಧಿಕಾರಿಗಳು ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಉದಯ ತೋಟದ, ಉಮೇಶ್ ಪೂಜಾರ, ಸಿದ್ದು ಹಿರೇಮಠ, ರಾಮಣ್ಣ ಕಂದಾರಿ, ಪಂಚಯ್ಯ ಹಿರೇಮಠ ಸೇರಿದಂತೆ ಅನೇಕ ಪತ್ರಕರ್ತರು ಭಾಗವಹಿಸಿದ್ದರು. ವಾರ್ತ ಅಧಿಕಾರಿಗಳು

ಸನ್ಮಾನ ಸ್ವೀಕರಿಸಿದ ಅವರು, ಪತ್ರಕರ್ತರೊಂದಿಗೆ ಉತ್ತಮ ಬಾಂಧವ್ಯ ಹೊಂದಿದಾಗ ಮಾತ್ರ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯ ಎಂದು ಅಭಿಪ್ರಾಯ ಹಚ್ಚಿಕೊಂಡರು.

# ಏ.21 ರಂದು ಶಂಕರಾಚಾರ್ಯ ಜಯಂತಿ, ಏ.23 ರಂದು ಭಗೀರಥ ಜಯಂತಿ ಅರ್ಥಪೂರ್ಣ ಆಚರಣೆ

ವಿಜಯನಗರ (ಹೊಸಪೇಟೆ): ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏಪ್ರಿಲ್ 21 ರಂದು ಶ್ರೀ ಶಂಕರಾಚಾರ್ಯರ ಜಯಂತಿ ಹಾಗೂ ಏಪ್ರಿಲ್ 23 ರಂದು ಭಗೀರಥ ಜಯಂತಿಯನ್ನು ಸಾಂಕೇತಿಕ ಮತ್ತು ಯಾವುದೇ ಧಾರ್ಮಿಕತೆಗೆ ಧಕ್ಕೆಯುಂಟಾಗದ ರೀತಿಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ್ ರಂಗಣ್ಣನವರ ತಿಳಿಸಿದರು.

ಈ ವೇಳೆ ಶಂಕರಾಚಾರ್ಯ ಸಮಾಜ ಮತ್ತು ಭಗೀರಥ ಸಮಾಜದ ಮುಖಂಡರು, ಸಮಾಜದ ಪದಾಧಿಕಾರಿಗಳು ಇದ್ದರು.

# ಕೃಷ್ಣಾ ಸಹಕಾರಿ ಸಕ್ಕರೆ ಕಾರಖಾನೆಯಿಂದ ಎರಡನೇ ಕಂತಿನ ಬಿಲ್ ಬಿಡುಗಡೆ: ರೈತರ ಖಾತೆಗೆ ಪ್ರತಿ ಟನ್‌ಗೆ 100 ರೂ ಜಮಾ



**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಕೃಷ್ಣಾ ಸಹಕಾರಿ ಸಕ್ಕರೆ ಕಾರಖಾನೆಯು (KSSKN) 2025–26ನೇ ಸಾಲಿನ ಕಬ್ಬು ಅರೆಯುವ ಹಂಗಾಮು ಯಶಸಿ ್ವಯಾಗಿ ಪೂರೈಸಿದ್ದು, ರೈತರಿಗೆ ನೀಡಬೇಕಿದ್ದ ಎರಡನೇ ಕಂತಿನ ಬಾಕಿ ಹಣವನ್ನು ಪಾವತಿಸಿದೆ ಎಂದು ಕಾರಖಾನೆಯ ಅಧ್ಯಕ್ಷ ಪರಪ್ಪ ಸವದಿ ತಿಳಿಸಿದ್ದಾರೆ.

ಕಾರಖಾನೆಯು ನವೆಂಬರ್ 10, 2025 ರಂದು ಹಂಗಾಮು ಆರಂಭಿಸಿ, ಫೆಬ್ರವರಿ 09, 2026 ರವರೆಗೆ ಒಟ್ಟು 5,33,788 ಮೆಟ್ರಿಕ್ ಟನ್ ಕಬ್ಬನ್ನು ಯಶಸ್ವಿಯಾಗಿ ಅರೆದಿದೆ. ಸದಸ್ಯರ ಮತ್ತು ರೈತರ ಸಂಪೂರ್ಣ ಸಹಕಾರದಿಂದ ಈ ಬಾರಿಯ ಹಂಗಾಮು ಸುಗಮವಾಗಿ ಮುಕ್ತಾಯಗೊಂಡಿದೆ.

ಸರ್ಕಾರದ ಮಾರ್ಗಸೂಚಿ ಮತ್ತು ಸ್ಥಳೀಯ ಶಾಸಕರಾದ ಲಕ್ಷ್ಮಣ ಸವದಿ ಹಾಗೂ ರಾಜು ಕಾಗೆ ಅವರ ಮಾರ್ಗದರ್ಶನದಂತೆ ರೈತರಿಗೆ ಕಾಲಕಾಲಕ್ಕೆ ಬಿಲ್ ಪಾವತಿಸಲಾಗುತ್ತಿದೆ:

ಮೊದಲನೇ ಕಂತು ಈಗಾಗಲೇ ಪ್ರತಿ ಮೆಟ್ರಿಕ್ ಟನ್‌ಗೆ ರೂ. 3,200/– ರಂತೆ ಪ್ರತಿ 15 ದಿನಕ್ಕೊಮ್ಮೆ ರೈತರ ಖಾತೆಗಳಿಗೆ ಪೂರ್ಣವಾಗಿ ಪಾವತಿಸಲಾಗಿದೆ.

ಎರಡನೇ ಕಂತು:ಸರ್ಕಾರ ಘೋಷಿಸಿದಂತೆ ಪ್ರತಿ ಟನ್‌ಗೆ ಒಟ್ಟು ರೂ. 3,300 ನಿಗದಿಪಡಿಸಲಾಗಿತ್ತು. ಇದರ ಬಾಕಿ ಮೊತ್ತದಲ್ಲಿ ಸರ್ಕಾರದ ಪಾಲು ರೂ. 50 ಮತ್ತು ಕಾರಖಾನೆಯ ಪಾಲು ರೂ. 50 ಸೇರಿ ಒಟ್ಟು 100 ರೂ ಗಳನ್ನು ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮಾ ಮಾಡಲಾಗಿದೆ.ಸಹಕಾರಿ ರಂಗದ ಈ ಸಂಸ್ಥೆಯು ರೈತರ ಆಸ್ತಿಯಾಗಿದೆ. ಮುಂದಿನ ಹಂಗಾಮಿನಲ್ಲಿಯೂ ಕೂಡ ರೈತ ಬಾಂಧವರು ಹೆಚ್ಚಿನ ಪ್ರಮಾಣದ, ಉತ್ತಮ ರಿಕವರಿ ಹೊಂದಿರುವ ಕಬ್ಬನ್ನು ನಮ್ಮ ಕಾರಖಾನೆಗೆ ಪೂರೈಸಬೇಕು. ಈ ಮೂಲಕ ಕಾರಖಾನೆಯನ್ನು ಆರ್ಥಿಕವಾಗಿ ಮತ್ತಷ್ಟು ಸದೃಢಗೊಳಿಸಲು ಮತ್ತು ಹೆಚ್ಚಿನ ಲಾಭದತ್ತ ಕೊಂಡೊಯ್ಯಲು ನಿಮ್ಮ ಸಹಕಾರ ಅತ್ಯಗತ್ಯ ಎಂದು ಕಾರ್ಖಾನೆ ಅಧ್ಯಕ್ಷ ಪರಪ್ಪಾ ಸವದಿ, ಹೇಳಿದರು.

ರೈತರ ಹಿತರಕ್ಷಣೆಗೆ ಕಾರಖಾನೆಯ ಆಡಳಿತ ಮಂಡಳಿ ಬದ್ಧವಾಗಿದ್ದು, ಸಹಕರಿಸಿದ ಎಲ್ಲಾ ಕಬ್ಬು ಬೆಳೆಗಾರರಿಗೆ ಮತ್ತು ಶಾಸಕರಿಗೆ ಅಧ್ಯಕ್ಷರು ಆಡಳಿತ ಮಂಡಳಿಯ ಪರವಾಗಿ ಅಭಿನಂದನೆ ಸಲ್ಲಿಸಿದ್ದಾರೆ.

# ಸಂಗೀತ ಪರೀಕ್ಷೆಗಳಲ್ಲಿ ಉನ್ನತ ದರ್ಜೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು

**ಬೆಳಗಾವಿ ವಾರ್ತೆ ಹುಬ್ಬಳ್ಳಿ :** ದಾನೇಶ್ವರಿ ಸಂಗೀತ ಪಾಠಶಾಲೆಯ ಮಕ್ಕಳು ನವಿ ಮುಂಬೈನ ಅಖಿಲ ಭಾರತೀಯ ಗಂಧರ್ವ ಮಹಾವಿದ್ಯಾಲಯ ಮಂಡಳ (ABGMVM), ದವರು ನಡೆಸಿದ ಪರೀಕ್ಷೆಗಳಲ್ಲಿ ಉನ್ನತ ದರ್ಜೆಯಲ್ಲಿ ತೇರ್ಗಡೆ ಯಾಗಿದ್ದಾರೆ. 1) ಮಧ್ಯಮ ಪ್ರಥಮ ವಿಭಾಗದಲ್ಲಿ ಅವನಿ ರೂಢಗಿ, 2) ಪ್ರವೇಶಿಕಾ ಪ್ರಥಮ ವಿಭಾಗದಲ್ಲಿ ಶ್ರೇಯಾ ಲಂಗೋಟಿ, ಆರ್ಯನ್ ಐತಾಳ್, ಅಚ್ಚುತ್ ಜಿ.ಸಿ., ಈಶಾನ ಜಿ .ಸಿ., ಚಾರ್ವಿ ಹಿರೇಮಠ, ಅನುಷಾ ಸರ್ವಂದ, ತನುಶ್ರೀ ಮಳಿಮಠ, 3) ಪ್ರಾರಂಬಿಕಾ ವಿಭಾಗದಲ್ಲಿ ಕಾರ್ಣಿಕ್ ಹುಬ್ಬಳ್ಳಿ, ಮಾನ್ಯಾ ಶಿರಗಾವಿ , ಸಾನ್ವಿ ರಾಠೋಡ , ತನುಶ್ರೀ ಹೂಗಾರ , ಪ್ರಾರ್ಥನಾ ಹವಾಲ್ದಾರ, ರಿಷಿಕಾ ಮಹಾಂತನಮಠ , ಅವರು ಪರೀಕ್ಷೆಗಳಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದು ತೇರ್ಗಡೆಯಾಗಿದ್ದಾರೆ. ದಾನೇಶ್ವರಿ ಸಂಗೀತ ಪಾಠಶಾಲೆಯ ಸಂಗೀತ ಶಿಕ್ಷಕಿ, ಕನ್ನಡ ಪ್ರಾಧ್ಯಾಪಕಿ ಪ್ರೊ ಶೋಭಾ ಜಾಬಿನ ಅವರು ಮಕ್ಕಳಿಗೆ ತರಬೇತಿ ನೀಡಿದ್ದಾರೆ. ದಾನೇಶ್ವರಿ ಸಂಗೀತ ಪಾಠಶಾಲೆಯಲ್ಲಿ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಹಾಗೂ ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಆಯೋಜಿಸಿದ್ದ ತ್ರಿವಿಧ ದಾಸೋಹಿ ತುಮಕೂರ ಸಿದ್ಧಗಂಗಾಮಠದ ಪರಮ ಪೂಜ್ಯ ಶ್ರೀ ಶ್ರೀ ಡಾ. ಶಿವಕುಮಾರ ಸ್ವಾಮಿಜಿಯವರ 119ನೇ ಜಯಂತಿ ಕಾರ್ಯಕ್ರಮದಲ್ಲಿ ಮಕ್ಕಳು ಪರೀಕ್ಷೆಗಳಲ್ಲಿ ಉನ್ನತ ದರ್ಜೆಯಲ್ಲಿ ತೇರ್ಗಡೆ ಯಾಗಿದ್ದಕ್ಕೆ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು. ಮಕ್ಕಳಿಗೆ ಹಾಗೂ ಶಿಕ್ಷಕಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಹಾಗೂ ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಅಭಿನಂದನೆಗಳನ್ನು ಸಲ್ಲಿಸಿದರು. ಶುಭ ಕೋರಿದರು. ರಾಣಿ ಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ, ನಿವೃತ್ ಪ್ರಾಚಾರ್ಯ ಪ್ರೊ ಎಸ್.ಎಂ.ಸಾತ್ಮಾರ, ಸೋಹನ ಸುರೇಶ ಹೊರಕೇರಿ, ಸುಜಯ ಸುರೇಶ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ನಿವೃತ್ ಗ್ರಂಥಪಾಲಕ ಬಿ.ಎಸ್.ಮಾಳವಾಡ , ಸಿದ್ದಮ್ಮ , ಅನುಸೂಯಾ, ಶ್ವೇತಾ , ಗಂಗಾ , ಶಾಂತಾ , ಶಾಲಿನಿ, ರಾಜೇಶ್ವರಿ, ಸ್ನೇಹಾ , ಕವಿತಾ, ಡಾ ಮಿನಲ್, ಗೌರಿ ಶ್ರೇಯಾ ಹರ್ಷಿಕಾ ವೇದಾ ಶ್ರೇಷ್ಠಾ ಗೌತಮ್ ಶಿವಾನಿ ಧ್ರುವಂತ್ ಸಮೃಧ್, ಮಂದಾರ , ಇಂಜಿನಿಯರ್ ಮಲ್ಲಿಕಾರ್ಜುನ ಜಾಬಿನ, ಸುಭಾಸ್, ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.



**ಸಂಸ್ಥೆಯ ಮಾಹಿತಿ.:** ಅಖಿಲ ಭಾರತೀಯ ಗಂಧರ್ವ ಮಹಾವಿದ್ಯಾಲಯ ಮಂಡಳ (ಂಃಉಒಗಿಒ) ಭಾರತೀಯ ಶಾಸ್ತ್ರೀಯ ಸಂಗೀತ ಮತ್ತು ನೃತ್ಯವನ್ನು ಉತ್ತೇಜಿಸುವ ಪ್ರಮುಖ ಸಂಸ್ಥೆಯಾಗಿದೆ. ಇದರ ಮುಖ್ಯ ಕಚೇರಿ/ಸಂಗೀತ ವಿದ್ಯಾಲಯವು ನವಿ ಮುಂಬೈನ ವಾಶಿಯಲ್ಲಿದೆ. ಭಾರತ ದೇಶದಲ್ಲಿ ಸಾವಿರಕ್ಕೂ ಹೆಚ್ಚು ಅಂಗಸಂಸ್ಥೆಗಳು ಮತ್ತು ನೂರಾರು ಪರೀಕ್ಷಾ ಕೇಂದ್ರಗಳನ್ನು ಹೊಂದಿದ್ದು, ಶಾಸ್ತ್ರೀಯ ಕಲೆಗಳ ಶಿಕ್ಷಣ ಮತ್ತು ಪರೀಕ್ಷೆಗಳನ್ನು ನಡೆಸುತ್ತದೆ. ಶಿಕ್ಷಣ: ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ (ಗಾಯನ), ನೃತ್ಯ (ಭರತನಾಟ್ಯ/ ಕಥಕ್), ಮತ್ತು ವಾದ್ಯ ಸಂಗೀತ. ಪರೀಕ್ಷೆಗಳು: ಪ್ರಾರಂಬಿಕಾ, ಪ್ರವೇಶಿಕಾ, ಮಧ್ಯಮ, ವಿಶಾರದ, ಅಲಂಕಾರ ಮುಂತಾದ ಹಂತಗಳಲ್ಲಿ ಪರೀಕ್ಷೆಗಳನ್ನು ನಡೆಸುತ್ತದೆ. ಧ್ಯೇಯ: ಭಾರತೀಯ ಶಾಸ್ತ್ರೀಯ ಸಂಗೀತ ಪರಂಪರೆಯನ್ನು ಸಂರಕ್ಷಿಸುವುದು ಮತ್ತು ಉತ್ತೇಜಿಸುವುದು.

# ನಮ್ಮ ದೇಶದ ಆಚಾರ, ವಿಚಾರಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ



**ಬೆಳಗಾವಿ ವಾರ್ತೆ ಮೂಡಲಗಿ:** ಜನ ಹಾಗೂ ಜಾನುವಾರುಗಳಿಗೆ ರೋಗ, ಋಜೀಣುಗಳು ಬರದೇ ಇರುವ ಹಾಗೇ ಹಳೆಯ ಕಾಲದ ಹಿರಿಯರು ಗ್ರಾಮದ ತುಂಬೆಲ್ಲ ಭಂಡಾರ (ಶುದ್ಧ ಅರಿಷಿಣ ಪುಡಿ)ವನ್ನು ಎರಚಿ ಜಾತ್ರೆಯನ್ನು ಮಾಡುವ ಪದ್ಧತಿಯನ್ನು ಈಗಲೂ ನಮ್ಮ ಹಿರಿಯರು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಈ ಮೂಲಕ ಎಲ್ಲ ಜಾತಿಯವರು ಕೂಡಿಕೊಂಡು ಗ್ರಾಮ ದೇವತೆಯರ ಜಾತ್ರೆಯನ್ನು ಯಶಸ್ವಿಯಾಗಿ ನೆರವೇರಿಸುತ್ತಿದ್ದಾರೆ ಎಂದು ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದರು.

ಸೋಮವಾರ, ತಾಲ್ಲೂಕಿನ ನಾಗನೂರು ಪಟ್ಟಣದಲ್ಲಿ ಜರುಗಿದ. ಅರಣ್ಯ ಸಿದ್ಧೇಶ್ವರ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಜಾತ್ರೆಗಳು ನಮ್ಮ ದೇಶಿಯ ವೈಭವವನ್ನು ಭಿತ್ತರಿಸುತ್ತಿವೆ ಎಂದರು.

ಹಿಂದಿನ ಕಾಲದಲ್ಲಿ ಪ್ಲೇಗ್, ಕಾಲರಾ ಮುಂತಾದ ಸಾಂಕ್ರಾಮಿಕ ರೋಗಗಳು ಹರಡುತ್ತಿದ್ದವು. ಜಾನುವಾರುಗಳಿಗೆ ಕಾಲುಬೇನೆ, ಬಾಯಿ ಬೇನೆ ಬರುತ್ತಿದ್ದವು. ಇವುಗಳನ್ನು ಹೋಗಲಾಡಿಸಲು ಜನರು ದೇವರಿಗೆ ಮೊರೆ ಹೋಗುತ್ತಿದ್ದರು. ಎಲ್ಲಾ ಜಾತಿಯ ಜನರು ಒಟ್ಟಾಗಿ ಸೇರಿಕೊಂಡು ಗ್ರಾಮ ದೇವತೆಯರ ಜಾತ್ರೆಗಳನ್ನು ಅಚ್ಚುಕಟ್ಟಾಗಿ ಮಾಡುತ್ತಿದ್ದರು. ದೇವರಿಗೆ ನೈವೇದ್ಯ ಅರ್ಪಿಸುತ್ತಿದ್ದರು.

ಈ ಮೂಲಕ ದೇವತೆಯರ ಕೃಪೆಗೆ ಪಾತ್ರರಾಗುತ್ತಿದ್ದರು. ಹಿರಿಯರು ಹಾಕಿಕೊಟ್ಟ ಸಂಪ್ರದಾಯಗಳನ್ನು ಈಗಿನ ಪೀಳಿಗೆಯವರು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ನಮ್ಮ ದೇಶದ ಆಚಾರ, ವಿಚಾರಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ ಎಂದು ಹೇಳಿದರು.

ಶಾಸಕ ಬಾಲಚಂದ್ರ ಜಾರಕಿಹೊಳಿಯವರನ್ನು ಜಾತ್ರಾ ಕಮಿಟಿಯ ಸದಸ್ಯರು ಸತ್ಕರಿಸಿದರು.

ಈ ಸಂದರ್ಭದಲ್ಲಿ ಲೆಕ್ಕ ಪರಿಶೋಧಕ ಸೈದಪ್ಪ ಗದಾಡಿ, ಮುಖಂಡರಾದ ಚಂದ್ರು ಬೆಳಗಲಿ, ಸುಭಾಸ ಬೆಳಗಲಿ (ಪಡದಲ್ಲಿ), ಗಣಪತಿ ದೇಸಾರ, ರಮೇಶ ಬೆಟಗೇರಿ, ನಾಗಪ್ಪ ಬೆಳಕೂಡ, ಹಣಮಂತ ಕಿತ್ತೂರ, ಸಿದ್ದಪ್ಪ ಯಡ್ರಾವಿ, ಸಿದ್ದಪ್ಪ ಗುಡೆನ್ನವರ, ಸಿದ್ದಲಿಂಗ ವಾಳಕಿ, ಸದಾಶಿವ ಯಡ್ರಾವಿ, ಕೆಂಚಪ್ಪ ಗೊರೋಜಿ, ಸಿದ್ದಪ್ಪ ಗೊರೋಜಿ, ಯಲ್ಲಪ್ಪ ಪೂಜೇರಿ, ಸಿದ್ದಪ್ಪ ಯಡ್ರಾವಿ, ಶ್ರೀಶೈಲ ಕಿತ್ತೂರ ಮತ್ತಿತರರು ಉಪಸ್ಥಿತರಿದ್ದರು.

# ಶ್ರೀ ಭಗೀರಥ ಜಯಂತಿ ನಿಮಿತ್ಯ ಪೂರ್ವಭಾವಿ ಸಭೆ

ಗದಗ: ಸರ್ಕಾರದ ಆದೇಶದನ್ವಯ ಈ ವರ್ಷವು ದಿನಾಂಕ:23.04.2026 ರಂದು ಆಚರಿಸಲಾಗುವ "ಶ್ರೀ ಭಗೀರಥ ಜಯಂತಿ" ನಿಮಿತ್ಯ ದಿ:09.04.2026 ರ ಗುರುವಾರ ಬೆಳಿಗ್ಗೆ:11.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೊಲೀಸ್ ದೂರು ಪ್ರಾಧಿಕಾರಕ್ಕೆ ಪ್ರತಿ ಜಿಲ್ಲೆಯಿಂದ ನಾಗರಿಕ ಸಮಾಜದಿಂದ ಕನಿಷ್ಟ 5 ಜನ ಸದಸ್ಯರ ನೇಮಕ ಮಾಡಿಕೊಳ್ಳಲು ಆಗ್ರಹ



**ಬೆಳಗಾವಿ ವಾರ್ತೆ ವಿಜಯಪುರ:** ಪೊಲೀಸ್ ದೂರು ಪ್ರಾಧಿಕಾರದ ಜಿಲ್ಲಾ ಸಮಿತಿಗೆ ಕನಿಷ್ಟ 5 ಜನ ಸದಸ್ಯರ ನೇಮಕ ಮಾಡಿಕೊಳ್ಳ ಬೇಕೆಂದು ಒತ್ತಾಯಿಸಿ ಮುಖ್ಯಮಂತ್ರಿಯ ವರ ವಿಶೇಷ ಕರ್ತವ್ಯ ಅಧಿಕಾರಿ ಆರ್. ಮಹಾದೇವ ಅವರ ಕಚೇರಿಗೆ ತೆರಳಿ ಪೊಲೀಸ್ ದೂರು ಪ್ರಾಧಿಕಾರ ಆಯ್ಕೆ ನಿಯೋಗದ ಸದಸ್ಯರು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿಕಾಸೌಧದ ಹಮ್ಮಿಕೊಂಡ ಸಭೆಯನ್ನು ಉದ್ದೇಶಿಸಿ ಮಲ್ಲಿಕಾರ್ಜುನ ಬಟಗಿ ಮಾತನಾಡಿ, ನಾಗರಿಕ ಸಮಾಜಕ್ಕೆ ನ್ಯಾಯಸಿಗಬೇಕಾದರೆ ಒಬ್ಬರನ್ನೆ ತೆಗೆದುಕೊಂಡರೆ ನೊಂದವರಿಗೆ ನ್ಯಾಯ ಸಿಗುವುದು ದೂರದ ಮಾತಾಗಿದೆ. ಆದ್ದರಿಂದ ಪ್ರತಿ ಜಿಲ್ಲೆಯಲ್ಲಿ ಕನಿಷ್ಠ 5 ಜನ ನಾಗರಿಕ ಸಮಾಜವನ್ನು ತೆಗೆದು ಕೊಳ್ಳಬೇಕು. ಮುಖ್ಯಮಂತ್ರಿಗಳಿಗೆ, ಸರ್ಕಾರದ ಪ್ರಧಾನ ಕಾರ್ಯದರ್ಶಿ ಶಾಲಿನಿ ರಜನೀಶ ಅವರಿಗೆ ಸಭೆ ಮೂಲಕ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಾದ ಪರಶುರಾಮ ಶಿವಶರಣ ಮಾತನಾಡಿ, ರಾಜ್ಯದಲ್ಲಿ ತುಳಿತಕ್ಕೆ ಒಳಗಾದ ಶೋಷಿತ, ದಲಿತ ಹಿಂದುಳಿದ, ಅಲ್ಪಸಂಖ್ಯಾರಿಗೆ, ಧ್ವನಿ ಇಲ್ಲದವರಿಗೆ ನ್ಯಾಯ ಸಿಗಬೇಕಾದರೆ ಕನಿಷ್ಠ 5 ಜನರನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು. ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಿಗಳಿಗೆ ನಾಗರಿಕ ಸೇವಾ ಸಮಾಜದಿಂದ ಅರ್ಹ ಸದಸ್ಯರನ್ನು ಸಂದರ್ಶನ ಮಾಡಿರುವುದು ಸ್ವಾಗತಾರ್ಹ. ಆದರೆ ಪೊಲೀಸ್ ದೂರು ಪ್ರಾಧಿಕಾರದ ಸಮಿತಿಗೆ ಜಿಲ್ಲಾವಾರು ನಾಗರಿಕ ಸಮಾಜದಿಂದ ಕೇವಲ ಓರ್ವ ಸದಸ್ಯರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿದು ಬಂದಿದೆ. ಇದು ಸಮಂಜಸ ಅಲ್ಲ. ಆದ್ದರಿಂದ ಪ್ರತಿ ಜಿಲ್ಲೆಯಿಂದ ಜಿಲ್ಲಾ ಮಟ್ಟದ ಪೊಲೀಸ್ ದೂರು ಪ್ರಾಧಿಕಾರಕ್ಕೆ ಕನಿಷ್ಠ 5 ಜನರನ್ನು ಆಯ್ಕೆ ಮಾಡಿಕೊಳ್ಳಬೇಕು. ಏಕೆಂದರೆ, ಪೊಲೀಸ್ ಇಲಾಖೆ ಸಿಬ್ಬಂಧಿ ಅಧಿಕಾರಿಗಳಿಂದ ದೌರ್ಜನ್ಯಕ್ಕೆ, ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ದೊರಕಿಸಿ ಕೊಡುವುದು ದೂರದ ಮಾತು. ಈ ಸಂದರ್ಭದಲ್ಲಿ ಹರಿಕೃಷ್ಣ ರಾವ, ಬಸರಾಜ ಮೈಸೂರು, ಎಂ. ಮಹದೇವಸಾಬ, ದೀಪಕ ಟಿ, ನಾಗರಾಜ ಆರ್., ಮಂಜು ಟಿ, ಶ್ರೇಯಶಕುಮಾರ, ಎಸ್. ಮಲ್ಲೇಶಪ್ಪ ಸೇರಿದಂತೆ ರಾಜ್ಯದ ಎಲ್ಲ 70 ಜನ ಉಪಸ್ಥಿತರಿದ್ದರು.

# ಡಿಜಿಟಲ್ ಪಾವತಿಯಿಂದ ಪಾರದರ್ಶಕತೆ: ನೆಲ್ಲಗಿ



**ಬೆಳಗಾವಿ ವಾರ್ತೆ ತಾಳಿಕೋಟೆ:** ವೀರಶೈವ ವಿದ್ಯಾವರ್ದಕ ಸಂಘದ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಆಶ್ರಯ ಕಾಲೋನಿಯಲ್ಲಿ ಆಯೋಜಿಸಲಾದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಿಶೇಷ ಶಿಬಿರವು 2ನೇ ದಿನ ಮಂಗಳವಾರ ಸಂಭ್ರಮದಿಂದ ಆರಂಭಗೊಂಡಿತು.

ಶಿಬಿರದ ಅಂಗವಾಗಿ ಮುಂಜಾನೆ ಎನ್.ಎಸ್.ಎಸ್ ಗೀತೆಯ ಗಾಯನ ಹಾಗೂ ಯೋಗಾಭ್ಯಾಸ ನಡೆಸಲಾಯಿತು. ಬಳಿಕ ವಿದ್ಯಾರ್ಥಿಗಳು ಆಶ್ರಯ ಕಾಲೋನಿಯ ಹನುಮಾನ್ ದೇವಾಲಯ ಮತ್ತು ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಯ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ ಶ್ರಮದಾನದಲ್ಲಿ ತೊಡಗಿಸಿಕೊಂಡರು.

ಶಿಬಿರದ ಮೊದಲ ದಿನ ಹಣರಹಿತ ಅರ್ಥವ್ಯವಸ್ಥೆ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ ಎಸ್.ಎಸ್. ನೆಲ್ಲಗಿ ಅವರು ಮಾತನಾಡಿ, ಹಣರಹಿತ ವ್ಯವಹಾರಗಳಿಂದ ಆರ್ಥಿಕ ಸ್ಥಿರತೆ ಸಾಧಿಸಬಹುದು ಹಾಗೂ ಡಿಜಿಟಲ್ ಪಾವತಿಗಳಿಂದ ಪಾರದರ್ಶಕತೆ ಹೆಚ್ಚುತ್ತದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಹಣದ ಮೌಲ್ಯ ಅರಿತು ವಂಚನೆಗಳಿಂದ ದೂರವಿದ್ದು, ಸಮಾಜದಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಎಮ್.ಆರ್. ಕತ್ತಿ ಅವರು ಮಾತನಾಡಿ, ಹಣರಹಿತ ವ್ಯವಸ್ಥೆಯಿಂದ ಭಾರತವು ಜಾಗತಿಕ ಆರ್ಥಿಕತೆಯಲ್ಲಿ ಮುಂಚೂಣಿಗೆ ಬರಲಿದೆ. ಎನ್.ಎಸ್.ಎಸ್ ಶಿಬಿರಗಳು ವಿದ್ಯಾರ್ಥಿಗಳ ಸಾಮಾಜಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಸಹಕಾರಿಯಾಗಿವೆ ಎಂದರು.

ಉಪನ್ಯಾಸಕರಾದ ಯು.ಎನ್. ಮಂಗೊಂಡ ಅವರು, ಡಿಜಿಟಲ್ ವ್ಯವಹಾರಗಳಿಂದ ನಿತ್ಯ ಜೀವನದಲ್ಲಿ ಭದ್ರತೆ ಮತ್ತು ಗೌಪ್ಯತೆ ಕಾಪಾಡಿಕೊಳ್ಳಬಹುದು ಡಿಜಿಟಲ್ ವ್ಯವಹಾರದಿಂದ ಮೋಸ ವಂಚನೆ ಹೋಗದಿರುವ ಕುರಿತು ತಿಳಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಆರ್.ಎಂ. ಬಂಟನೂರ ಅವರು ಮಾತನಾಡಿ, ಬಸ್ ಪ್ರಯಾಣದಿಂದ ಹಿಡಿದು ದೊಡ್ಡ ಉದ್ಯಮಗಳವರೆಗೆ ಹಣರಹಿತ ವ್ಯವಹಾರ ವ್ಯಾಪಕವಾಗಿದ್ದು ಇದರ ಸುರಕ್ಷತೆ ಕುರಿತು ವಿದ್ಯಾರ್ಥಿಗಳು ಅಗತ್ಯ ಜ್ಞಾನ ಹೊಂದಬೇಕು ಎಂದು ಹೇಳಿದರು.

ಪ್ರಶಿಕ್ಷಣಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳು ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಅಧಿಕಾರಿಗಳಾದ ಎ.ಎ. ಗಂಗನಗೌಡ ಕಾರ್ಯದರ್ಶಿ ಗಳಾದ ರೇಷ್ಮಾ ಚಲವಾದಿ ಹಾಗೂ ಎನ್ ಎಸ್ ಎಸ್ ಶಿಬಿರಾರ್ಥಿಗಳು, ಮಹಾವಿದ್ಯಾಲಯದ ಸರ್ವಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜ್ಯೋತಿ ಮತ್ತು ತಂಡದವರು ಪ್ರಾರ್ಥಿಸಿದಿರು. ಪಾರ್ವತಿ ಮತ್ತು ತಂಡದವರು ಎನ್.ಎಸ್.ಎಸ್ ಗೀತೆಯನ್ನು ಹಾಡಿದರು. ಉಮಾಶ್ರೀ ಸ್ವಾಗತಿಸಿ ಪರಿಚಯಿಸಿದರು. ಸಂತೋಷ ಬಿರಾದಾರ್ ಪುಷ್ಪಾರ್ಪಣೆ ನೆರವೇರಿಸಿದರು. ಅನೀಶಾ ವಂದಿಸಿದರು. ಮಹಾಲಿಂಗ ಕಾರ್ಯಕ್ರಮ ನಿರೂಪಿಸಿದರು.

# ಬೇಸಿಗೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಬಾರದು: ಜಿಲ್ಲಾಧಿಕಾರಿ ಡಾ. ಆನಂದ

**ಬೆಳಗಾವಿ ವಾರ್ತೆ ವಿಜಯಪುರ:** ಬೇಸಿಗೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು, ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈವರೆಗೂ ಟ್ಯಾಂಕರ್ ಸರಬರಾಜು ಅವಶ್ಯಕತೆ ಕಂಡುಬಂದಿಲ್ಲ.ಆದಾಗ್ಯೂ ಸಮಸ್ಯೆ ಇರುವ ಭಾಗದಲ್ಲಿ ಕುಡಿಯುವ ನೀರಿಗೆ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು ಎಂದರು. ಪ್ರತಿ ಗ್ರಾಪಂಗಳು ನೀರು ಪೂರೈಕೆಯಲ್ಲಿ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು.

ಭವಿಷ್ಯದ ದಿನಗಳಲ್ಲಿ ಎಲ್ಲಿ ಸಮಸ್ಯೆ ಉಲ್ಬಣಿಸಬಹುದೋ ಅಲ್ಲಿ ಪರ್ಯಾಯವಾಗಿ ಜಲಮೂಲಗಳನ್ನು ಗುರುತಿಸಿಟ್ಟುಕೊಳ್ಳಬೇಕು ಎಂದ ಜಿಲ್ಲಾಧಿಕಾರಿಗಳು ಬೋರವೆಲ್ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದರು.

ಈ ಹಿಂದೆ ಕುಡಿಯುವ ನೀರಿಗೆ ಎಲ್ಲೆಲ್ಲಿ ಸಮಸ್ಯೆಯಾಗಿತ್ತು ಎಂಬ ಮಾಹಿತಿ ಇದೆ. ಅಲ್ಲಿ ಯಾವುದೇ ತೊಂದರೆಯಾಗದ ರೀತಿಯಲ್ಲಿ ತಾಲೂಕು ಮಟ್ಟದಲ್ಲಿ ಕಾಲ–ಕಾಲಕ್ಕೆ ಕಾರ್ಯಪಡೆ ಸಭೆ ನಡೆಸುವ ಮೂಲಕ ಬೇಸಿಗೆಯಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಇನ್ನೊಂದೆಡೆ ಲಭ್ಯವಿರುವ ಜಲಮೂಲಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ನೀರು ಪರೀಕ್ಷಿಸಿ, ಪೂರೈಸಲು ಕ್ರಮ ಕೈಗೊಳ್ಳಬೇಕು. ಈ ವಿಷಯದಲ್ಲಿ ಬಹು ಜಾಗೃತಿ ವಹಿಸಬೇಕು ಎಂದರು.

ಒಎಚ್ ಟಿ ನೀರು ಸಂಗ್ರಹ ಟ್ಯಾಂಕ್ ನಿರಂತರವಾಗಿ ಸ್ವಚ್ಛಗೊಳಿಸಬೇಕು. ದಾಖಲೆ ನಮೂದಿಸಿ,ನಿರ್ವಹಿಸಬೇಕು ಗ್ರಾಪಂ ಮಟ್ಟದಲ್ಲಿ ಬೋರವೆಲ್ ದುರಸ್ತಿ ತಮ್ಮ ಹಂತದಲ್ಲಿ ಮಾಡಿಕೊಳ್ಳಬೇಕು.



ಈಗಾಗಲೇ ಸಾಕಷ್ಟು ಸೂಚನೆಗಳನ್ನು ನೀಡಲಾಗಿದೆ. ಬೋರವೆಲ್ ದುರಸ್ತಿ ಮಾಡಿಸದೇ ನಿರ್ಲಕ್ಷ್ಯ ವಹಿಸಬಾರದು. ಮುಂಚಿತವಾಗಿ ತಿಳಿದುಕೊಳ್ಳಬೇಕು ಎಂದರು.

ಗ್ರಾಮ ಪಂಚಾಯತಿ, ಸ್ಥಳೀಯ ಸಂಸ್ಥೆಗಳ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎಂದೂ ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದ ಅವರು, ಎಲ್ಲಿಯೂ ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಬಿಸಿಲಿನ ತಾಪಮಾನದಿಂದಾಗುವ ಪರಿಣಾಮಗಳ ಬಗ್ಗೆ ಜನರು ವಹಿಸಬೇಕಾದ ಅಗತ್ಯ ಮುನ್ನೆಚ್ಚರಿಕೆ ಬಗ್ಗೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಇದೇ ವೇಳೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ, ಎಲ್ಲ ತಾಲೂಕಿನ ತಹಶೀಲ್ದಾರರು, ತಾಲೂಕ ಪಂಚಾಯತಿ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001